MAA ಫ್ರೆಂಡ್ಸ್ ಸಾರಥ್ಯದಲ್ಲಿ...

# ಯುವ ಮಾರ್ಗ

VOICE OF THE NATION

ಕನ್ನಡ ದಿನಪತ್ರಿಕೆ "ಇದು ರಾಷ್ಟ್ರದ ಧ್ವನಿ"

ಸಂಪಾದಕರು : ಅನಿಲ ಕುಮಾರ್ ಹೆಚ್
Cell : 9743497111

YUVA MARGA KANNADA DAILY NEWS PAPER

ಪ್ರಧಾನ ಸಂಪಾದಕರು : ಮನೋಜ ಮಿಶ್ರಾ
Cell : 9743496111

ಸಂಪುಟ: 04 | ಸಂಚಿಕೆ: 248 | ಬುಧವಾರ : 16-07-2025 | ರಾಯಚೂರು | RNI NO: KARKAN/2022/90446 | ಪುಟ: 4 | ಬೆಲೆ: ರೂ: 2-00

VOLUME: 04 | ISSUE: 248 | WEDNESDAY : 16-07-2025 | RAICHUR | EMAIL: YUVAMARGA@GMAIL.COM | PAGE: 4 | PRICE: Rs: 2-00

# ಕರ್ನಾಟಕದಿಂದ ಬರುವ ಭಕ್ತರ ಅನುಕೂಲಕ್ಕಾಗಿ ಮಂತ್ರಾಲಯದಲ್ಲಿ ಸುವ್ಯವಸ್ಥಿತ ವಸತಿ ಗೃಹಗಳ ನಿರ್ಮಾಣಕ್ಕೆ ಕ್ರಮ: ಸಚಿವ ರಾಮಲಿಂಗಾರೆಡ್ಡಿ

**ಯುವ ಮಾರ್ಗ ಸುದ್ದಿ**

**ರಾಯಚೂರ,ಜು.15–** ಕರ್ನಾಟಕ ರಾಜ್ಯದಿಂದಲೇ ಹೆಚ್ಚಿನ ಸಂಖ್ಯೆಯಲ್ಲಿ ಬರುವ ಭಕ್ತರ ಅನುಕೂಲಕ್ಕಾಗಿ ಮಂತ್ರಾಲಯದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ವಸತಿ ಗೃಹಗಳ ನಿರ್ಮಾಣಕ್ಕೆ ಕ್ರಮವಹಿಸುವುದಾಗಿ ಸಾರಿಗೆ ಮತ್ತು ಮುಜರಾಯಿ ಸಚಿವರಾದ ರಾಮಲಿಂಗಾರೆಡ್ಡಿ ಅವರು ಹೇಳಿದರು.

ಆಂಧ್ರಪ್ರದೇಶದ ಕರ್ನೂಲ್ ಜಿಲ್ಲೆಯ ಮಂತ್ರಾಲಯಕ್ಕೆ ಭೇಟಿ ನೀಡಿ ಶ್ರೀ ರಾಘವೇಂದ್ರ ಸ್ವಾಮಿ ಅವರ ದರ್ಶನದ ಪಡೆದು, ಮಂತ್ರಾಲಯದ ಕರ್ನಾಟಕ ಛತ್ರದಲ್ಲಿ ಧಾರ್ಮಿಕ ದತ್ತಿ ಇಲಾಖೆಯಿಂದ ನಿರ್ಮಾಣ ಮಾಡಿರುವ ನೂತನ ಹಾಗೂ ಹಳೆ ಕಟ್ಟಡಗಳ ಪರಿಶೀಲನೆ ನಡೆಸಿ ಕರ್ನಾಟಕ ರಾಜ್ಯ ವಸತಿ ಗೃಹ ಕಟ್ಟಡದ ಸಭಾಂಗಣದಲ್ಲಿ ಅವರು ಸುದ್ದಿಗಾರರೊಂದಿಗೆ ಮಾತನಾಡಿದರು.

ಮಂತ್ರಾಲಯಕ್ಕೆ ಪ್ರತಿ ದಿನ ಅಂದಾಜು 200 ಬಸ್‌ಗಳು ರಾಜ್ಯದ ಬೇರೆ ಬೇರೆ ಭಾಗಗಳಿಂದ ಬರುತ್ತವೆ. ರೈಲಿನ ಮೂಲಕವು ಜನರು ಮಂತ್ರಾಲಯಕ್ಕೆ ಬರುತ್ತಾರೆ. ಆಂಧ್ರಕ್ಕೆ ಹೋಲಿಸಿದರೆ ಶೇ.60ರಷ್ಟು ಜನರು ಕರ್ನಾಟಕ ರಾಜ್ಯದಿಂದಲೇ ಮಂತ್ರಾಲಯಕ್ಕೆ ಆಗಮಿಸುತ್ತಾರೆ. ಈ ಬಗ್ಗೆ ಮಂತ್ರಾಲಯದ ಸ್ವಾಮೀಜಿ ಅವರೊಂದಿಗೆ ಚರ್ಚಿಸಿದಾಗ, ಕರ್ನಾಟಕದಿಂದ ಬರುವ ಭಕ್ತರ ಅನುಕೂಲಕ್ಕಾಗಿ ಮಂತ್ರಾಲಯದಲ್ಲಿ ವಸತಿ ಗೃಹಗಳ ನಿರ್ಮಾಣಕ್ಕೆ ಸೂಕ್ತವಾದ ಜಾಗದ ವ್ಯವಸ್ಥೆ ಮಾಡಿಕೊಡುವುದಾಗಿ ಸ್ವಾಮೀಜಿ ಅವರು ಮಾತುಕೊಟ್ಟಿದ್ದಾರೆ ಎಂದು ಸಚಿವರು ತಿಳಿಸಿದರು.



ಮಂತ್ರಾಲಯದಲ್ಲಿ ಈಗಿರುವ ಕರ್ನಾಟಕ ರಾಜ್ಯ ವಸತಿ ಗೃಹ ಕಟ್ಟಡದ ಕಳಪೆ ಕಾಮಗಾರಿಯ ಬಗ್ಗೆ ಲೋಕಾಯುಕ್ತಕ್ಕೆ ದೂರು ಸಲ್ಲಿಕೆಯಾಗಿದೆ. ಕಳಪೆ ಕಾಮಗಾರಿ ನಡೆದಿದೆ ಎಂದು ಲೋಕಾಯುಕ್ತರಿಂದ ಸಾಬೀತಾದಲ್ಲಿ ಸಂಬಂಧಿಸಿದ ಗುತ್ತಿಗೆದಾರ 'ರಿಂದಲೇ ಕಟ್ಟಡದ ದುರಸ್ತಿ ಮಾಡಿಸಲಾಗುವುದು. ಇಲ್ಲವಾದಲ್ಲಿ ಕಟ್ಟಡದಲ್ಲಿನ ನ್ಯೂನ್ಯತೆಗಳ ಬಗ್ಗೆ ಪರಿಶೀಲಿಸಿ ಮಾಸ್ಟರ್ ಪ್ಲಾನ್ ರೂಪಿಸಿ ಕಟ್ಟಡವನ್ನು ಸರಿಪಡಿಸಲಾಗುವುದು ಎಂದು ಸಚಿವರು ಹೇಳಿದರು.

**ಆನಲೈನ್ ವ್ಯವಸ್ಥೆಗೆ ಕ್ರಮ:** ಧಾರ್ಮಿಕ ದತ್ತಿ ಇಲಾಖೆಯಿಂದ ಮಂತ್ರಾಲಯದಲ್ಲಿ ನಿರ್ಮಾಣ ಮಾಡಿರುವ ಕರ್ನಾಟಕ ರಾಜ್ಯದ ವಸತಿ ಗೃಹದಲ್ಲಿ ಒಟ್ಟು 50 ಕೋಣೆಗಳಿವೆ. ಇವುಗಳನ್ನು ಕರ್ನಾಟಕದಿಂದ ಬರುವ ಭಕ್ತರಿಗೆ ಮೀಸಲಿರಿಸಿದೆ. ತಲಾ ನಾಲ್ಕು ಜನರು 12 ಗಂಟೆ ಸಮಯ ವಾಸ್ತವ್ಯ ಮಾಡಲು 500 ರೂಪಾಯಿ ದರ ನಿಗದಿಪಡಿಸಲಾಗಿದೆ. 12 ಗಂಟೆ ಮೀರಿದಾಗ 1000 ರೂ. ದರ ನಿಗದಿಪಡಿಸಲಾಗುತ್ತದೆ. ಒಟ್ಟು 50 ರೂಮುಗಳ ಪೈಕಿ 30 ರೂಮುಗಳನ್ನು ಆನಲೈನ್ ಮೂಲಕ ಹಾಗೂ ಇನ್ನುಳಿದ 20 ರೂಮುಗಳನ್ನು ನೇರವಾಗಿ ಹಣ ಪಾವತಿಸಿ ಬುಕ್ಕಿಂಗ್ ಮಾಡುವ ವ್ಯವಸ್ಥೆಗೆ ಕ್ರಮ ವಹಿಸುವುದಾಗಿ ಸಚಿವರು ತಿಳಿಸಿದರು.

**ಟೂರಿಸಂ ಇಲಾಖೆಗೆ ಉಸ್ತುವಾರಿ:** ಕಲ್ಯಾಣ ಮಂಟಪ, ಛತ್ರ, ವಸತಿ ಗೃಹಗಳ ನಿರ್ಮಾಣ ಪ್ರಕರಣವು ನ್ಯಾಯಾಲಯದ ಅಂಗಳದಲ್ಲಿರುವುದರಿಂದ ಕಟ್ಟಡದ ದುರಸ್ತಿಗೆ ತೊಡಕಾಗಿ ಪರಿಣಮಿಸಿದೆ. ಮಂತ್ರಾಲಯ, ಶ್ರೀಶೈಲಂ, ತಿರುಪತಿ ಸೇರಿದಂತೆ ನಾನಾ ಕಡೆಗಳಲ್ಲಿ ವಿವಾದದಿಂದ ಕೂಡಿರುವ ಜಾಗದ ಸಮಸ್ಯೆಯನ್ನು ಬೇಗನೆ ಇತ್ಯರ್ಥಪಡಿಸಬೇಕು ಎಂದು ಖುದ್ದು ಆಂಧ್ರಪ್ರದೇಶದ ಮುಖ್ಯಮಂತ್ರಿಗಳು ಆಯಾ ದತ್ತಿ ಸಂಸ್ಥೆಗಳಿಗೆ ಪತ್ರ ಬರೆದಿದ್ದಾರೆ ಎಂದು ತಿಳಿಸಿದ ಸಚಿವರು, ಉತ್ತಮ ದರ್ಜೆಯ ನಿರ್ವಹಣೆಗಾಗಿ ಮಂತ್ರಾಲಯದಲ್ಲಿರುವ ಕರ್ನಾಟಕ ವಸತಿ ಗೃಹಗಳ ಕಟ್ಟಡದ ನಿರ್ಹಹಣೆಯ ಉಸ್ತುವಾರಿಯನ್ನು ಪ್ರವಾಸೋದ್ಯಮ ಇಲಾಖೆಗೆ ವಹಿಸುವ ಬಗ್ಗೆ ಪ್ರವಾಸೋದ್ಯಮ ಸಚಿವರಾದ ಹೆಚ್ ಕೆ ಪಾಟೀಲ ಅವರೊಂದಿಗೆ ಮಾತನಾಡುವುದಾಗಿ ಸಚಿವರು (2ನೇಪುಟಕ್ಕೆ)

# ರೈತರ ಹೋರಾಟಕ್ಕೆ ಮಣಿದ ರಾಜ್ಯ ಸರ್ಕಾರ, ದೇವನಹಳ್ಳಿ ಭೂ ಸ್ವಾಧೀನ ರದ್ದು

**ಬೆಂಗಳೂರು,ಜು.15–** ಕೊನೆಗೂ ರೈತರ ಹೋರಾಟಕ್ಕೆ ಮಣಿದಿರುವ ರಾಜ್ಯ ಸರ್ಕಾರ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೇವಹಳ್ಳಿ ತಾಲ್ಲೂಕಿನ ಚನ್ನರಾಯಪಟ್ಟಣ ಹೋಬಳಿಯಲ್ಲಿ ಹೈಟೆಕ್ ರಕ್ಷಣಾ ಮತ್ತು ವೈಮಾಂತರಿಕ್ಷ ಪಾರ್ಕ್ ಸ್ಥಾಪನೆಗೆ ಸಂಬಂಧಿಸಿದಂತೆ ಭೂ ಸ್ವಾಧೀನ ಪ್ರಕ್ರಿಯೆಯನ್ನು ಕೈಬಿಟ್ಟು ತತ್‌ಕ್ಷಣದಿಂದಲೇ ಅನ್ವಯವಾಗುವಂತೆ ಅಧಿಸೂಚನೆಯನ್ನು ರದ್ದುಪಡಿಸಿದೆ.



ಇದರಿಂದಾಗಿ ಕಳೆದ ಹಲವು ತಿಂಗಳಿನಿಂದ ತಮ ಜಮೀನು ಉಳಿಸಿಕೊಳ್ಳಲು ಪ್ರತಿಭಟನೆ ನಡೆಸುತ್ತಿದ್ದ ಅನ್ನದಾತರ ಹೋರಾಟಕ್ಕೆ ಜಯ ಸಿಕ್ಕಂತಾಗಿದೆ. ವಿಧಾನಸೌಧದ ಸಮ್ಮೇಳನ ಸಭಾಂಗಣದಲ್ಲಿ ಮುಖ್ಯ ಮಂತ್ರಿ ಸಿದ್ದರಾಮಯ್ಯ ಅವರ ಅಧ್ಯಕ್ಷತೆಯಲ್ಲಿ ಮಹತ್ವ ಸಭೆ ನಡೆಯಿತು. ಸಭೆಯಲ್ಲಿ ಸಚಿವರಾದ ಎಂ.ಬಿ.ಪಾಟೀಲ್, ಕೆ.ಎಚ್.ಮುನಿಯಪ್ಪ, ಹೆಚ್.ಕೆ.ಪಾಟೀಲ್, ಕೃಷ್ಣ ಭೈರೇಗೌಡ, ಪ್ರಿಯಾಂಕ ಖರ್ಗೆ, ಭೈರತಿ ಸುರೇಶ್, ಮುಖ್ಯಮಂತ್ರಿಗಳ ರಾಜಕೀಯ ಕಾರ್ಯದರ್ಶಿ ನಸೀರ್ ಅಹದ್, ಕಾನೂನು ಸಲಹೆಗಾರ ಪೊನ್ನಣ್ಣ, ಅಡ್ವೋಕೇಟ್ ಜನರಲ್ ಶಶಿಕಿರಣ ಶೆಟ್ಟಿ, ರೈತ ನಾಯಕಿ ಚುಕ್ಕಿ ನಂಜುಂಡಸ್ವಾಮಿ, ನಟ ಪ್ರಕಾಶ್ ರಾಜ್, ಬಡಗಲಪುರ ನಾಗೇಂದ್ರ, ದೇವನಹಳ್ಳಿ ರೈತ ಮುಖಂಡರು ಭಾಗವಹಿಸಿದ್ದರು.

ಚನ್ನರಾಯಪಟ್ಟಣದಲ್ಲಿ ರಾಜ್ಯ ಸರ್ಕಾರ ಒಟ್ಟು 1777 ಎಕರೆ ಜಮೀನನಲ್ಲಿ ಹೈಟೆಕ್ ರಕ್ಷಣಾ ಮತ್ತು ವೈಮಾಂತರಿಕ್ಷ ಪಾರ್ಕ್ ಸ್ಥಾಪನೆ ಮಾಡಲು ಕರ್ನಾಟಕ ಕೈಗಾರಿಕಾ ಪ್ರದೇಶ ಅಭಿವೃದ್ಧಿ ನಿಗಮ(ಕೆ ಐಎಡಿಬಿ) ಭೂಸ್ವಾಧೀನಕ್ಕೆ ಮುಂದಾಗಿತ್ತು. ಇದಕ್ಕೆ ರೈತರು ತೀವ್ರ ವಿರೋಧ ವ್ಯಕ್ತಪಡಿಸಿ ಯಾವುದೇ ಕಾರಣಕ್ಕೂ ಬೆಲೆ ಬಾಳುವ ನಮ ಜಮೀನನ್ನು ನೀಡುವುದಿಲ್ಲ ಎಂದು ಹೋರಾಟ ನಡೆಸಿದ್ದರು. ನಾಲ್ಕು ಬಾರಿ ಸಭೆ ನಡೆಸಿದ್ದರೂ ಫಲಪ್ರದವಾಗಿರಲಿಲ್ಲ.

ಅಂತಿಮವಾಗಿ ಮಂಗಳವಾರ ಸಿಎಂ ಸಿದ್ದರಾಮಯ್ಯ ಅವರು ಸಚಿವರು ಹಾಗೂ ಕಾನೂನು ತಜ್ಞರ ಸಲಹೆ ಪಡೆದು ಭೂಸ್ವಾಧೀನ ಪ್ರಕ್ರಿಯೆಯನ್ನು ಕೈಬಿಟ್ಟು ಹಿಂದೆ ಹೊರಡಿಸಿದ್ದ ಅಧಿಸೂಚನೆಯನ್ನು ರದ್ದುಪಡಿಸುವುದಾಗಿ ಖುದ್ದು ಘೋಷಣೆ ಮಾಡಿದರು. ಈ ಹಿಂದೆ ನಡೆದ ಸಭೆಯಲ್ಲಿ ಭೂಮಿ ನೀಡುವ ಸಂಬಂಧ ರೈತರಲ್ಲೇ ಎರಡು ಗುಂಪು ಸೃಷ್ಟಿಯಾಗಿತ್ತು. ಒಂದು ಗುಂಪು ಭೂಮಿ ನೀಡಲು ಒಪಿದ್ದರೆ, ಮತ್ತೊಂದು ಗುಂಪು ಭೂಮಿ ನೀಡಲು ವಿರೋಧಿಸಿತ್ತು.

ಈ ಸಂಬಂಧ ರೈತ ಮುಖಂಡರ ಜೊತೆ ಸಭೆ ನಡೆಸಿರುವ ಸಿಎಂ, ರೈತರ ಬೇಡಿಕೆಗೆ ಸ್ಪಂದಿಸಿದ್ದಾರೆ. ಭೂ ಸ್ವಾಧೀನವನ್ನು ಕೈ ಬಿಟ್ಟಿದ್ದೇವೆ ಎಂದು ಘೋಷಿಸಿದ್ದಾರೆ. ಬಳಿಕ ಮಾತನಾಡಿದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, ರೈತರು ಸ್ವಯಂಪ್ರೇರಿತರಾಗಿ ಭೂಮಿ ನೀಡಲು ಮುಂದೆ ಬಂದರೆ ಒಪ್ಪಂದ ಮೇಲೆ ತೆಗೆದುಕೊಳ್ಳುತ್ತೇವೆ. ನಮಗೆ ಕೈಗಾರಿಕೆ ಬೆಳೆಯಬೇಕು. ಭೂಮಿ ಕೊಡುವ ರೈತರಿಗೆ ಸೂಕ್ತ ಪರಿಹಾರ ಕೊಡುತ್ತೇವೆ ಎಂದು ಹೇಳಿದರು.ಹಿಂದೆ ಮಾಡಿದ ಅಧಿಸೂಚನೆಯನ್ನು ರದ್ದು ಮಾಡುತ್ತಿದ್ದೇವೆ. ಇದನ್ನು ರೈತರು ಹಾಗೂ ಹೋರಾಟಗಾರರು ಸ್ವಾಗತಿಸಿದ್ದಾರೆ. ಬೆಂಗಳೂರಿಗೆ ಹತ್ತಿರವಾಗಿರುವುದರಿಂದ ಕೃಷಿ ಭೂಮಿ ಇರುವುದರಿಂದ ಅಧಿಸೂಚನೆ ರದ್ದು ಮಾಡಿದ್ದು, ಎಲ್ಲದಕ್ಕೂ ಈ (2ನೇಪುಟಕ್ಕೆ)

# ದ್ವಿಚಕ್ರ ವಾಹನ ಸವಾರರಿಗೆ ಹೆಲ್ಮೆಟ್ ಜಾಗೃತಿ

**ಯುವ ಮಾರ್ಗ ಸುದ್ದಿ**

**ಲಿಂಗಸುಗೂರು,ಜು.15–** ದ್ವಿಚಕ್ರ ವಾಹನ ಸವಾರ ಮತ್ತು ಹಿಂಬದಿ ಸವಾರ ಕಡ್ಡಾಯವಾಗಿ ಹೆಲ್ಮೆಟ್ ಹಾಕುವಂತೆ ಪೋಲಿಸ್ ಇಲಾಖೆಯಿಂದ ಪಟ್ಟಣದಲ್ಲಿ ಮಂಗಳವಾರ ಜಾಗೃತಿ ಮೂಡಿಸುವ ಜೊತೆಗೆ ಸಂಚಾರಿ ನಿಯಮಗಳ ಪಾಲನೆಗೆ ತಾಕೀತು ಮಾಡಲಾಯಿತು.



ಜಿಲ್ಲಾ ಪೋಲಿಸ್ ವರಿಷ್ಠಾಧಿಕಾರಿಗಳ ಆದೇಶದಂತೆ ಡಿವೈಎಸ್‌ಪಿ ದತ್ತಾತ್ರೇಯ ಕಾರ್ನಾಡ್‌ರ ನೇತೃತ್ವದಲ್ಲಿ ಪೋಲಿಸ್‌ಠಾಣೆ ವ್ಯಾಪ್ತಿಯಲ್ಲಿ ದ್ವಿಚಕ್ರ ವಾಹನಗಳ ಸವಾರರು ಕಡ್ಡಾಯವಾಗಿ ಹೆಲ್ಮೆಟ್ ಧರಿಸಬೇಕು. ಇದರಿಂದ ಅಪಘಾತದ ಭೀಕರತೆಯನ್ನು ತಡೆ ಯಲು ಸಾಧ್ಯವೆಂದು ಸಾರ್ವಜನಿಕರಿಗೆ ಮನವರಿಕೆ ಮಾಡಲಾಯಿತು. ಜೊತೆಗೆ ಸಂಚಾರಿ ನಿಯಮಗಳನ್ನು ಪಾಲಿಸುವಂತೆ ಸೂಚನೆ ನೀಡಲಾಯಿತು.

ಪಟ್ಟಣದ ಗುಡದನಾಳ ಕ್ರಾಸ್‌ದಿಂದ ಬೈಕ್‌ಗಳ ಮೂಲಕ ಹೊರಟ ಪೋಲಿಸರು ಬಸವಸಾಗರ ವೃತ್ತದಿಂದ ಗಡಿಯಾರ್ ಚೌಕ್‌ವರೆಗೂ ರ್‍ಯಾಲಿ ನಡೆಸಿದರು.

# ಕೆ.ಶಿವನಗೌಡ ನಾಯಕ ಹುಟ್ಟು ಹಬ್ಬದ ಪ್ರಯುಕ್ತ ಉಚಿತ ನೋಟ್ ಪುಸ್ತಕಗಳು ವಿತರಣೆ

**ಯುವ ಮಾರ್ಗ ಸುದ್ದಿ**

**ಅರಕೇರಾ,ಜು.15–**ತಾಲ್ಲೂಕಿನ ಆಲ್ಕೋಡ್ ಗ್ರಾಮದ ಸರ್ಕಾರಿ ಶಾಲೆಗಳಲ್ಲಿ ಮಾಜಿ ಸಚಿವರಾದ ಕೆ.ಶಿವನಗೌಡ ನಾಯಕ ಅವರ 48ನೇ ವರ್ಷದ ಹುಟ್ಟು ಹಬ್ಬದ ಅಂಗವಾಗಿ ಅವರ ಅಭಿಮಾನಿಗಳು ಅರ್ಥಪೂರ್ಣವಾಗಿ ಶಾಲೆ ಮಕ್ಕಳಿಗೆ ಉಚಿತ ನೋಟ್ ಪುಸ್ತಕಗಳನ್ನು ವಿತರಿಸುವುದರ ಮೂಲಕ ಹುಟ್ಟು ಹಬ್ಬವನ್ನು ಆಚರಿಸಿದರು.




ಆಲ್ಕೋಡ್ ಗ್ರಾಮ ಪಂಚಾಯಿತಿ ಅಧ್ಯಕ್ಷರಾದ ಮಹೇಶ ನಾಯಕ ಅವರು ಮಾತನಾಡಿ ನಮ್ಮ ನಾಯಕನ ಹುಟ್ಟು ಹಬ್ಬದ ಪ್ರಯುಕ್ತ ಸಮಾ ಜಕ್ಕೆ ಏನಾದರೂ ಕೊಡುಗೆ ಕೊಡಬೇಕು ಎನ್ನುವ ಸದುದ್ದೇಶದಿಂದ ಮಕ್ಕಳಿಗೆ ಉಚಿತ ನೋಟ್ ಪುಸ್ತಕಗಳನ್ನು ವಿತರಣೆ ಮಾಡುತ್ತಿದ್ದೇವೆ ಎಂದರು. ಈ ಸಂದರ್ಭದಲ್ಲಿ ಗ್ರಾಮದ ಹಿರಿಯರಾದ ಲಚಮಯ್ಯ ಮರಕಂದಿನ್ನಿ, ಸಾಬಣ್ಣ ಕಾವಲಿ, ರಂಗಪ್ಪ ಅಬಕಾರಿ, ಶಿವರಾಜ ಪ್ಯಾಟಿಗೇರಾ, ರಮೇಶ ಪ್ಯಾಟೀಗೇರಾ, ಅಮರೇಶ ದಾರಲ್, ಮೌನೇಶ ಮಕ್ಕಾಳಿ, ಮುದುಕಪ್ಪ ಪಲಗುಡ್ಡ, ಹಂಪಯ್ಯ ಗೂಳಿ ಇದ್ದರು.

# ಶೋಷಿತರ ಬದುಕಿಗೆ ಅಂಬೇಡ್ಕರ್ ವಿಚಾರಗಳೇ ದಾರಿದೀಪ: ಸುರೇಶ ಜಗ್ಲಿ

**ಯುವ ಮಾರ್ಗ ಸುದ್ದಿ**

**ಮಾನ್ವಿ,ಜು.15–**ಭಾರತ ದೇಶದಲ್ಲಿ ಅನೇಕ ರೀತಿಯ ಅವಮಾನಗಳು, ಅಸಮಾನತೆಗಳು, ಅತ್ಯಾಚಾರಗಳು, ಮೌಡ್ಯಾಚರಣೆಗಳು, ದೌರ್ಜನ್ಯಗಳಿಗೆ ಬಲಿಯಾದ ದಲಿತ ಮತ್ತು ಮಹಿಳೆಯರು ಹಾಗೂ ಶೋಷಿತ ಜನರ ಬದುಕಿಗೆ ಬಾಬಾಸಾ ಹೇಬ್ ಅಂಬೇಡ್ಕರ್ ವಿಚಾರಗಳೇ ದಾರಿದೀಪವಾಗಿವೆ ಎಂದು ಶಿಕ್ಷಕ ಹಾಗೂ ಮಾದಿಗ ಸರಕಾರಿ ನೌಕರರ ಸಂಘದ ಮಾನವಿ ತಾಲೂಕಾಧ್ಯಕ್ಷ ಸುರೇಶ ಜಗ್ಲಿ ಅಭಿಮತ ವ್ಯಕ್ತಪಡಿಸಿದರು.



ತಾಲೂಕಿನ ಉಮಳಿಹೋಸೂರು ಗ್ರಾಮದ ಮರಿಯಮ್ಮ – ಅಯ್ಯಪ್ಪ ಇವರ ಮನೆಯಲ್ಲಿ ಬಹುಜನ ಸಂಘರ್ಷ ಸಮಿತಿಯಿಂದ ಸೋಮವಾರ ಆಯೋಜಿಸಿದ್ದ, 118ನೇ ಮನೆ–ಮನೆಗೆ ಅಂಬೇಡ್ಕರ್ ಕಾರ್ಯಕ್ರಮ ಉದ್ಘಾಟಿಸಿ ಮಾತನಾ ಡಿದರು. ಬಾಬಾಸಾಹೇಬ್ ಅಂಬೇಡ್ಕರ್ ರವರು ಮೊದಲ ಆಧ್ಯತೆ ಶಿಕ್ಷಣಕ್ಕೆ ನೀಡಿದ್ದರು. ದಲಿತರು ಉತ್ತಮ ಹಾಗೂ ಉನ್ನತ ಶಿಕ್ಷಣ ಪಡೆದಾಗ ಮಾತ್ರ ದೇಶದ ನೈಜ ಇತಿಹಾಸವನ್ನು ಮತ್ತು ಶೋಷಿತರಿಗಾಗಿ ಶ್ರಮಿಸಿದ ಅನೇಕ ಮಹಾತ್ಮರು ಸೇರಿದಂತೆ ಡಾ.ಬಿ.ಆರ್.ಅಂಬೇಡ್ಕರ್ ರವರ ನೈಜ ವಿಚಾರ ಹಾಗೂ ಸಿದ್ಧಾಂತಗಳನ್ನು ಅರಿಯಲು ಸಾಧ್ಯವಾಗಲಿದೆ ಎಂದರು.

ಪ್ರಾಸ್ತಾವಿಕವಾಗಿ ಬಹುಜನ ಸಂಘರ್ಷ ಸಮಿತಿ ಸಂಸ್ಥಾಪಕ ಅಧ್ಯಕ್ಷ ಜೆ.ಶರಣಪ್ಪ ಬಲ್ಲಟಗಿ, ರಾಯಚೂರು ಜಿಲ್ಲಾಧ್ಯಕ್ಷ ಸಂಪತ್ತುರಾಜ್ ಜಾಗೀರಪನ್ನೂರು ಮಾತನಾಡಿದರು.

ಚಿಕ್ಕಕೊಟ್ನೇಕಲ್ ಗ್ರಾಮ ಪಂಚಾಯಿತಿ ಗ್ರಂಥಾಪಾಲಕ (2ನೇಪುಟಕ್ಕೆ)

# ಜಿಲ್ಲಾಡಳಿತದಿಂದ ಶಿವಶರಣ ಹಡಪದ ಅಪ್ಪಣ್ಣ ಜಯಂತಿ

**ಯುವ ಮಾರ್ಗ ಸುದ್ದಿ**

**ರಾಯಚೂರು,ಜು15–**ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ರಾಯಚೂರು ಮಹಾ ನಗರ ಪಾಲಿಕೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಇವರ ಸಂಯುಕ್ತ ಆಶ್ರಯದಲ್ಲಿ ನಗರದ ಪಂಡಿತ ಸಿದ್ಧರಾಮ ಜಂಬಲದಿನ್ನಿ ರಂಗಮಂದಿರದಲ್ಲಿ ಮಂಗಳವಾರ ಶಿವಶರಣ ಹಡಪದ ಅಪ್ಪಣ್ಣ ಅವರ ಜಯಂತ್ಯುತ್ಸವ ನಡೆಯಿತು.



ಜಯಂತ್ಯುತ್ಸವ ನಿಮಿತ್ತ ಬೆಳಗ್ಗೆ ಬಸವೇಶ್ವರ ವೃತ್ತದಿಂದ ಆರಂಭಗೊಂಡ ಶ್ರೀ ಶಿವಶರಣ ಹಡಪದ ಅಪ್ಪಣ್ಣ ಅವರ ಭಾವಚಿತ್ರದ ಮೆರವಣಿಗೆಗೆ ಅಪರ ಜಿಲ್ಲಾಧಿಕಾರಿಗಳಾದ ಶಿವಾನಂದ ಅವರು ಚಾಲನೆ ನೀಡಿದರು. ಮೆರವಣಿಗೆಯು ನಗರದ ಪ್ರಮುಖ ರಸ್ತೆಗಳಲ್ಲಿ ಸಂಚರಿಸಿ ರಂಗ ಮಂದಿರಕ್ಕೆ ಬಂದು ಸೇರಿತು. ಸಮಾಜದ ಮುಖಂಡರು, ಅಧಿಕಾರಿಗಳು ಮತ್ತು ನಾಗರಿಕರು ರಂಗಮಂದಿರದವರೆಗೆ ಮೆರವಣಿಗೆಯಲ್ಲಿ ಸಾಲಾಗಿ ಸಾಗಿ ಮೆರವಣಿಗೆಯ ಕಳೆ ಹೆಚ್ಚಿಸಿದರು.

ರಂಗಮಂದಿರದಲ್ಲಿ ನಡೆದ ವೇದಿಕೆಯ ಕಾರ್ಯಕ್ರಮಕ್ಕೆ ಮಹಾನಗರ ಪಾಲಿಕೆಯ ಉಪಾಧ್ಯಕ್ಷರು ಆಗಿರುವ ಪ್ರಭಾರ ಅಧ್ಯಕ್ಷರಾದ ಜೆ.ಸಾಜಿದ್ ಸಮೀರ್ ಅವರು ದೀಪ ಬೆಳಗಿ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು

ಕಾರ್ಯಕ್ರಮದಲ್ಲಿ ಹಟ್ಟಿ ಸರ್ಕಾರಿ ಪಿಯು ಕಾಲೇಜಿನ ಪ್ರಾಚಾರ್ಯರಾದ ಕಮಲಾಬಾಯಿ ಅವರು ಶ್ರೀ ಶಿವಶರಣ ಹಡಪದ ಅಪ್ಪಣ್ಣ ಅವರ (2ನೇಪುಟಕ್ಕೆ)

## ಮೊದಲನೇಯ ಪುಟದಿಂದ

# ಭಕ್ತರ ಅನುಕೂಲಕ್ಕಾಗಿ ಮಂತ್ರಾಲಯದಲ್ಲಿ ಸುವ್ಯವಸ್ಥಿತ ವಸತಿ ಗೃಹಗಳ ನಿರ್ಮಾಣಕ್ಕೆ ಕ್ರಮ

ತಿಳಿಸಿದರು. ಈ ವೇಳೆ ಪ್ರವಾಸೋದ್ಯಮ ಇಲಾಖೆಯ ಆಯುಕ್ತರಾದ ವೆಂಕಟೇಶ್, ಜಿಲ್ಲಾಧಿಕಾರಿಗಳಾದ ನಿತೀಶ್ ಕೆ, ಜಿಲ್ಲಾಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಸದಸ್ಯರಾದ ಕಿಶೋರ್ ಕುಮಾರ ಪಾಟೀಲ, ಪ್ರವಾಸೋದ್ಯಮ ಇಲಾಖೆಯ ಉಪ ನಿರ್ದೇಶಕರಾದ ಕೃಷ್ಣ ಶಾವಂತಗೇರಿ, ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ವಿಭಾಗೀಯ ನಿಯಂತ್ರಣಾಧಿಕಾರಿ ಎಂ.ಎಸ್.ಚಂದ್ರಶೇಖರ, ಕರ್ನಾಟಕ ವಸತಿ ಗೃಹ ಕಟ್ಟಡದ ಅಧಿಕಾರಿ ಆಂಜನೇಯ ಸೇರಿದಂತೆ ಇನ್ನಿತರರು ಇದ್ದರು.

# ಜಿಲ್ಲಾಡಳಿತದಿಂದ ಶಿವಶರಣ ಹಡಪದ ಅಪ್ಪಣ್ಣ ಜಯಂತಿ

ಬಗ್ಗೆ ವಿಶೇಷ ಉಪನ್ಯಾಸ ನೀಡಿ, ಅಪ್ಪಣ್ಣನವರು ಜಾತಿ ಹಾಗೂ ಅಸಮಾನತೆಯ ವಿರುದ್ಧ ಹೋರಾಡಿದ ಮಹಾನ್ ಶರಣರಾಗಿದ್ದಾರೆ. ಸಮಾಜದಲ್ಲಿನ  ದುರ್ಬಲರು, ಹಿಂದುಳಿದವರು, ಬಡವರ ಬದುಕಿನ ಬಗ್ಗೆ ತಿಳಿದು ಅವರ ಹಕ್ಕುಗಳಿಗಾಗಿ ಹೋರಾಡಲು ಅಪ್ಪಣ್ಣನವರು ತಮ್ಮ ಜೀವನವನ್ನು ಸಮರ್ಪಿಸಿಕೊಂಡರು ಎಂದು ತಿಳಿಸಿದರು.

ಅಪ್ಪಣ್ಣನವರು ಕೇವಲ ದೇವರ ಪೂಜೆ ಮಾಡುವ ವ್ಯಕ್ತಿಯಾಗದೇ ಕಾಯಕತತ್ತ್ವ, ಸಮಾನತೆಯ ದೃಷ್ಟಿಕೋಣ, ಮಾನವತೆಯ ಬಗ್ಗೆ ಸ್ಪಷ್ಟ ಚಿಂತನೆ ಹೊಂದಿದ್ದ ವ್ಯಕ್ತಿತ್ವವುಳ್ಳವರಾಗಿದ್ದರು. ಅಪ್ಪಣ್ಣನವರು ಹೊಂದಿದ್ದ ಸಾಮಾಜಿಕ ಕಾಳಜಿಯ ವ್ಯಕ್ತಿತ್ವವು, ಅವರ ಕಾಯಕತತ್ವವು ನಮಗೆ ಆದರ್ಶಪ್ರಾಯವಾಗಿದೆ ಎಂದರು.

ನಮ್ಮ ಸಮಾಜದಲ್ಲಿ ಈಗಲೂ ಜಾತಿ, ಮತ, ಭಾಷೆಯ ಹೆಸರಿನಲ್ಲಿ ನಡೆಯುವ ಬೇಧ–ಭಾವದ ಬಗ್ಗೆ ಯುವಕರು ಅರಿಯಬೇಕು. ಜಾಗೃತರಾಗಬೇಕು. ಕೆಟ್ಟದಾದ ವ್ಯಸನಗಳಿಗೆ ಯಾರು ಸಹ ಬಲಿಯಾಗಬಾರದು ಎಂದು ತಿಳಿಸಿದರು.

ಸಾಧಕರಿಗೆ ಸನ್ಮಾನ: ಎಸ್‌ಎಸ್‌ಎಲ್‌ಸಿ, ಪಿಯುಸಿಯಲ್ಲಿ ಉತ್ತಮವಾಗಿ ವಿದ್ಯಾಭ್ಯಾಸ ಮಾಡಿ ಯಶ ಸಾಧಿಸಿದ ಹಡಪದ ಅಪ್ಪಣ್ಣ ಸಮಾಜದ ವಿದ್ಯಾರ್ಥಿಗಳಿಗೆ, ಸರ್ಕಾರಿ ಸೇವೆಯಲ್ಲಿದ್ದು ನಿವೃತ್ತರಾದವರಿಗೆ ಸನ್ಮಾನಿಸಿ ಹಾಗೂ ಪ್ರಮಾಣ ಪತ್ರ ನೀಡಿ ಗೌರವಿಸಲಾಯಿತು.

ಕಾರ್ಯಕ್ರಮದಲ್ಲಿ ತಹಸೀಲ್ದಾರ್ ಪರಶುರಾಮ್, ಹಡಪದ ಅಪ್ಪಣ್ಣ ಸಮಾಜದ ಗದ್ದೆಪ್ಪ ಎಂ, ಮಹಾಬಲೇಶ್ವರಪ್ಪ, ಕರಿಬಸವ ಗಟ್ಟಿಬಿಚ್ಚಾಲೆ, ನಾಗರಾಜ್ ಸರ್ಜಾಪುರ, ಧನಂಜಯ, ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾಲಯದ ಸಿಂಡಿಕೇಟ್ ಸದಸ್ಯರಾದ ಶಿವಣ್ಣ, ಮುಖಂಡರಾದ ಮರಿಸ್ವಾಮಿ ಗಟ್ಟಿಬಿಚ್ಚಾಳಿ ಸೇರಿದಂತೆ ಮತ್ತಿತರರು ಭಾಗವಹಿಸಿದ್ದರು.

ಸಮಾರಂಭದಲ್ಲಿ ಸಮಾಜದ ಹಿರಿಯರು, ಮಹಿಳೆಯರು, ಯುವಕರು ಹಾಗೂ ಮಕ್ಕಳು ಹೆಚ್ಚಿನ ಸಂಖ್ಯೆಯಲ್ಲಿ ಸೇರಿ ಕಾರ್ಯಕ್ರಮದ ಮೆರಗು ಹೆಚ್ಚಿಸಿದರು.

# ಶೋಷಿತರ ಬದುಕಿಗೆ ಅಂಬೇಡ್ಕರ್ ವಿಚಾರಗಳೇ ದಾರಿದೀಪ: ಸುರೇಶ ಜಗ್ಲಿ

ಅಯ್ಯಪ್ಪ ಉಮಳಿ ಹೊಸೂರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು. ಬಹುಜನ ಸಂಘರ್ಷ ಸಮಿತಿ ಮಾನ್ವಿ ತಾಲೂಕಾಧ್ಯಕ್ಷ ಯಮುನಪ್ಪ ಜಾಗೀರಪನ್ನೂರು ಕಾರ್ಯಕ್ರಮ ನಿರೂಪಿಸಿ ವಂದಿಸಿದರು.

ಈ ಸಂದರ್ಭದಲ್ಲಿ ಗ್ರಾ.ಪಂ. ಸದಸ್ಯ ಯಲ್ಲಪ್ಪ ಉಮಳಿಹೋಸೂರು, ಪತ್ರಕರ್ತ ಹಾಗೂ ಹೋರಾಟಗಾರ ದುರುಗಪ್ಪ ಸಾದಾಪೂರ, ಹುಸೇನಪ್ಪ ಜಾಗೀರಪನ್ನೂರು, ಬಲವಂತಪ್ಪ ಪನ್ನೂರ್, ಪ್ರಕಾಶ್ ಸೆಂಟ್ರಿಂಗ್ ಮೇಸ್ತ್ರಿ ಕೊನಾಪುರ್ಪೇಟೆ ಮಾನವಿ, ಯಲ್ಲಪ್ಪ ಸಾಲಿ, ಅಯ್ಯಪ್ಪ, ಸಿದ್ದಪ್ಪ, ಯೊಹಾನ, ಸ್ವಾಮಿ, ಯೇಸಪ್ಪ, ಮೌನೇಶ್ ಮುರಾರಿ, ಲಕ್ಷ್ಮಣ, ದೊಡ್ಡ ಕರಿಯಪ್ಪ , ಅಯ್ಯಮ್ಮ, ರಂಗಮ್ಮ ಉಮಳಿಹೋಸೂರು ಸೇರಿದಂತೆ ಕುಟುಂಬಸ್ಥರು, ವಿದ್ಯಾರ್ಥಿಗಳು ಭಾಗವಹಿಸಿದ್ಧರು.

# ರೈತರ ಹೋರಾಟಕ್ಕೆ ಮಣಿದ ರಾಜ್ಯ ಸರ್ಕಾರ, ದೇವನಹಳ್ಳಿ ಭೂ ಸ್ವಾಧೀನ ರದ್ದು

ತೀರ್ಮಾನ ಅನ್ವಯಿಸುವುದಿಲ್ಲ ಎಂದರು. 1,777 ಎಕರೆ ಡಿನೋಟಿಫಿಕೇಷನ್ ಕೈಬಿಟ್ಟಿದ್ದೇವೆ. ಆದರೆ ಭೂಮಾಲೀಕರು ಸ್ವಯಂಪ್ರೆ?ರಿತರಾಗಿ ಭೂಮಿ ನೀಡಲು ಮುಂದಾದರೆ ಖರೀದಿಸುತ್ತೆ?ವೆ. ಬಲವಂತವಾಗಿ ಖರೀದಿಸುವುದಿಲ್ಲ. ರಾಜ್ಯಕ್ಕೆ ಕೈಗಾರಿಕೆಗಳು ಬರಬೇಕು ಎಂಬುದು ನಮ ಆಶಯ. ಸರ್ಕಾರದ ನಿರ್ಧಾರ ದೇವನಹಳ್ಳಿ ಪ್ರದೇಶಕ್ಕೆ ಮಾತ್ರ ಸಿಮೀತವಾಗಿದೆ ಎಂದು ಮುಖ್ಯಮಂತ್ರಿ ತಿಳಿಸಿದರು.

ವಿಮಾನ ನಿಲ್ದಾಣ ಸಮೀಪ ಇರುವುದರಿಂದ ಹಾಗೂ ಗ್ರಿ?ನ ಬೆಲ್ಟ್ ನಲ್ಲಿ ಇರುವುದರಿಂದ ಸ್ವಾಧೀನಪಡಿಸಿಕೊಳ್ಳುವುದು ಬೇಡ ಎಂಬುವುದು ರೈತರ ಬೇಡಿಕೆಯಾಗಿತ್ತು. ಸರ್ಕಾರ ಈಗಾಗಲೇ ರೈತರು, ಹೋರಾಟಗಾರರರಿಂದ ಅಹವಾಲುಗಳನ್ನು ಆಲಿಸಿದೆ. ಕೆ.ಎಚ್.ಮುನಿಯಪ್ಪ ಅವರು ಕೂಡಾ ರೈತರ ಪರವಾಗಿ ವಾದಿಸಿದ್ದರು ಎಂದರು.ರೈತರ ಹೋರಾಟದಲ್ಲಿ ಪ್ರಗತಿಪರ ಸಂಘಟನೆಗಳು ಭಾಗಿಯಾಗಿದ್ದವು. ಪ್ರಗತಿಪರ ಹಾಗೂ ಎಡ ಸಂಘಟನೆಗಳು, ದಲಿತ ಸಂಘಟನೆಗಳು ಭಾಗಿಯಾಗಿದ್ದವು. ಇದೊಂದು ವಿಶಿಷ್ಟವಾದ ಐತಿಹಾಸಿಕವಾದ ಹೋರಾಟವಾಗಿತ್ತು. ಸಾಧಕ ಬಾಧಕಗಳನ್ನು ಚರ್ಚೆ ಮಾಡಿ ಸರ್ಕಾರ ಇದೀಗ ತೀರ್ಮಾನಕ್ಕೆ ಬಂದಿದೆ ಎಂದರು.ಕರ್ನಾಟಕ ಕೈಗಾರಿಕಾಭಿವೃದ್ಧಿ ಮಂಡಳಿ(ಕೆಐಎಡಿಬಿ)ಯಿಂದ ದೇವನಹಳ್ಳಿ ತಾಲ್ಲೂಕಿನ ಚನ್ನರಾಯಪಟ್ಟಣದ 13 ಗ್ರಾಮಗಳ 1777 ಎಕರೆ ಜಮೀನನ್ನು ಸ್ವಾಧೀನಪಡಿಸಿಕೊಳ್ಳಲು ಸರ್ಕಾರ ಮುಂದಾಗಿತ್ತು. 2021ರಲ್ಲಿ ಪ್ರಾಥಮಿಕ ಅಧಿಸೂಚನೆ ಹೊರಡಿಸಲಾಗಿತ್ತು. 2022ರಲ್ಲಿ ಅಂತಿಮ ಅಧಿಸೂಚನೆ ಹೊರಡಿಸಲಾಗಿತ್ತು.

**ಪ್ರಕಾಶ್ ರಾಜ್ ಮೆಚ್ಚುಗೆ:**ಭೂಸ್ವಾಧೀನ ನಿರ್ಧಾರದಿಂದ ಹಿಂದೆ ಸರಿದ ಸರ್ಕಾರದ ನಡೆಯನ್ನು ನಟ ಪ್ರಕಾಶ್ ರಾಜ್ ಪ್ರಶಂಸಿದ್ದಾರೆ. ಇದೇ ವೇಳೆ ಮಾತನಾಡಿ ಈಖ್ಖಮುಖ್ಯಮಂತ್ರಿ ಅವರ ಸಾಮಾಜಿಕ ನ್ಯಾಯ ಕೇವಲ ನುಡಿಯಲ್ಲಿ ಮಾತ್ರವಲ್ಲ ನಡೆಯಲ್ಲೂ ಅದನ್ನು ಇಂದು ಅವರು ತೋರಿಸಿಕೊಟ್ಟಿದ್ದಾರೆಟ್ಟ್ಟ್ ಎಂದು ಪ್ರಕಾಶ್ ರಾಜ್ಅವರುಹೇಳಿದರು.

# ಸಮಾಜ ಕಲ್ಯಾಣ ಇಲಾಖೆ ಡಿಡಿಯಿಂದಅಕ್ರಮವಾಗಿ ಅರ್ಜಿ ಸ್ವೀಕಾರ ತನಿಖೆಗೆ ಮನವಿ

**ಬಳ್ಳಾರಿ, ಜು.15–** ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕರು, ಅಲೆಮಾರಿ ಅಭಿವೃದ್ಧಿ ನಿಗಮದ ವ್ಯವಸ್ಥಾಪಕ ನಿರ್ದೇಶಕರಾಗಿರು ಮಲ್ಲಿಕಾರ್ಜುನ ಅವರು. ಕಾನೂನು ಬಾಹಿರವಾಗಿ ಭೂ ಮಾಲೀಕರ ಅರ್ಜಿಗಳನ್ನು ಸ್ವೀಕರಿಸಿದ್ದು ಈ ಬಗ್ಗೆ ತನಿಖೆ ನಡೆಸಿ ಕ್ರಮ ತೆಗೆದುಕೊಳ್ಳಬೇಕು ಎಂದು ದಲಿತ ಹಕ್ಕುಗಳ ಜಂಟಿ ಕ್ರಿಯಾ ಸಮಿತಿ ಡಿಸಿಯವರಿಗೆ ಮನವಿ ಸಲ್ಲಿಸಿದೆ.



ಭೂರಹಿತರಿಗೆ ಸರ್ಕಾರದಿಂದ ಭೂಮಿ ನೀಡುವ ಸರ್ಕಾರದ ಯೋಜನೆಗೆ ನಿಗಧಿತ ಆರು ಅಂಶಗಳೊಂದಿಗೆ ಅರ್ಜಿ ನಮೂನೆ–1 ರಲ್ಲಿ ಸಂಬಂಧಪಟ್ಟ ಇಲಾಖೆ ಕಛೇರಿಗೆ ಅರ್ಜಿ ಸಲ್ಲಿಸಬೇಕು.

ಇದಕ್ಕಾಗಿ ಅಧಿಸೂಚನೆ ಹೊರಡಿಸಬೇಕು. ಭೂ ಮಾಲೀಕರಿಗೆ ತಿಳಿಸಲು ವ್ಯಾಪಕ ಪ್ರಚಾರ ಮಾಡಲು ಪತ್ರಿಕಾ ಪ್ರಕಟಣೆ ನೀಡಬೇಕು. ಆದರೆ ಈ ಉಪ ನಿರ್ದೇಶಕರು, ಜಿಲ್ಲಾಧಿಕಾರಿಗಳಿಂದ ಅನುಮೋದನೆ ಪಡೆಯದೇ, ಅಧಿಸೂಚನೆ ಹೊರಡಿಸದೇ ಹಾಗೂ ಪತ್ರಿಕಾ ಪ್ರಕಟಣೆ ಹೊರಡಿಸದೇ, ತಮ್ಮ ಕಛೇರಿಗೆ ಬಂದ ಭೂ ಮಾಲೀಕರ ಅರ್ಜಿಗಳನ್ನು ಜೇಷ್ಠತೆ ಅನುಗುಣವಾಗಿ ನಮೂದಿಸದೆ. ನಿಯಮ ಬಾಹಿರವಾಗಿ ತಮ್ಮ ಇಲಾಖೆಯಿಂದ ಸುಳ್ಳು ಪತ್ರಗಳನ್ನು ಮಾಡಿ ಕೇವಲ ಕೆಲ ಮಧ್ಯವರ್ತಿಗಳು ತಯಾರಿಸಿದ ಪತ್ರಗಳಿಗೆ ಸಹಿ ಮಾಡಿಕೊಟ್ಟು ಅಧಿಕಾರ ದುರುಪಯೋಗ ಮಾಡಿದ್ದಾರೆ.

ಭೂ ಒಡೆತನ ಯೋಜನೆಯು ಬಡ ಕುಟುಂಬಗಳಿಗೆ ನೆರವು ನೀಡುವ ಯೋಜನೆಯಾಗಿದ್ದು, ನಮ್ಮ ಜಿಲ್ಲೆಯ 5 ತಾಲ್ಲೂಕು ಗಳಲ್ಲಿ ಈ ಯೋಜನೆಗೆ ಯಾವುದೇ ಅಧಿಕೃತ ಅರ್ಜಿಗಳನ್ನು ಆಹ್ವಾನಿಸದಿರುವುದರಿಂದ ಇವರು ವಿರುದ್ಧ ಕ್ರಿಮಿನಲ್ ಮೊಕದ್ದಮೆ ದಾಖಲಿಸಿ ಸ ಕಾನೂನು ಕ್ರಮ ಜರುಗಿಸಬೇಕೆಂದು ಮನವಿ ಮಾಡಲಾಗಿದೆ. ದಲಿತ ಹಕ್ಕುಗಳ ಜಂಟಿ ಕ್ರಿಯಾ ಸಮಿತಿಯ ಮುಖಂಡರುಗಳಾದ ಶಿವಶಂಕರ್, ಎ.ಮಾನಯ್ಯ, ಸಂಗನಕಲ್ಲು ವಿಜಯಕುಮಾರ್ ಮೊದಲಾದವರು ಇದ್ದರು.

# ಗ್ರಾಮೀಣ ಜನರು ಆರೋಗ್ಯದ ಕಡೆ ಗಮನಹರಿಸಿ

**ಯುವ ಮಾರ್ಗ ಸುದ್ದಿ**

**ಅರಕೇರಾ,ಜು.15–**ಗ್ರಾಮೀಣ ಜನರ ಆರೋಗ್ಯ ಜಾಗೃತಿಗೆ ಉಚಿತ ಆರೋಗ್ಯ ಶಿಬಿರಗಳು ಸಹಕಾರಿಯಾಗಿವೆ, ಬಡ ಜನತೆ ಆರೋಗ್ಯದ ಬಗ್ಗೆ ನಿರ್ಲಕ್ಷ ತೋರದೆ ತಜ್ಞವೈದ್ಯರು ಲಭ್ಯವಿದ್ದಾಗ ಶಿಬಿರದಲ್ಲಿ ಪಾಲ್ಗೊಂಡು ಉಚಿತ ಆರೋಗ್ಯ ಶಿಬಿರದ ಸದುಪಯೋಗ  ಪಡೆದುಕೊಳ್ಳಬೇಕು ಎಂದು ಸಮುದಾಯ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿಗಳಾದ ಡಾ. ಬಸರಾಜ್ ಅವರು ಹೇಳಿದರು.



ಅರಕೇರಾ ಪಟ್ಟಣದ ವಾರ್ಡ್ ನಂ.2ರ ಕೆಂಚಮ್ಮನ ಕಟ್ಟೆ ಆವರಣದಲ್ಲಿ ನಡೆದ ಉಚಿತ ಆರೋಗ್ಯ ತಪಾಸಣಾ ಶಿಬಿರದಲ್ಲಿ ಮಾತನಾಡಿದ ಅವರು ಇತ್ತೀಚಿನ ದಿನಗಳಲ್ಲಿ ಪ್ರತಿಯೊಬ್ಬರಿಗೂ ಬಿಪಿ,ಶುಗರ್ ಹೃದ್ರೋಗ ಹಾಗೂ ಕಿಡ್ನಿ ಕಾಯಿಲೆಗಳು ಸಾಮಾನ್ಯವಾಗಿವೆ ಇವು ಶ್ರೀಮಂತ ಕಾಯಿಲೆಗಳಾಗಿದ್ದು, ಬಡ ಜನರು ಆರ್ಥಿಕವಾಗಿ ಭರಿಸಲು ಅಸಾಧ್ಯ.

ಗ್ರಾಮೀಣ ಭಾಗದ ಹಾಗೂ ನಗರ ಪ್ರದೇಶದ ಬಡ ಜನರಿಗೆ ಇಂಥ ಉಚಿತ ಆರೋಗ್ಯ ಶಿಬಿರಗಳ ಮೂಲಕವೇ  ಚಿಕಿತ್ಸೆಗೆ ಒಳಪಡಿಸಿದಾಗ ಮಾತ್ರ ಅವರನ್ನು ಸಂಕಷ್ಟದಿಂದ ಪಾರು ಮಾಡಲು ಸಾಧ್ಯ. ನಾನು ಕೂಡ ಗ್ರಾಮೀಣ ಹಳ್ಳಿಯಿಂದ ಬಂದಿದ್ದೇನೆ ಬಡತನದ ಪರಿಚಯವು ನನಗೆ ಇದ್ದು ಒಂದು ಉನ್ನತ ಸ್ಥಾನದ ಹೊಣೆ ಹೊಂದಿದ ಮೇಲೆ ಬಡ ಜನರ ಸೇವೆಯನ್ನು ಅವರ ಋಣವನ್ನು ಈ ರೀತಿ ಆರೋಗ್ಯ ಶಿಬಿರಗಳ ಮೂಲಕ ತೀರಿಸಲು ಸಾಧ್ಯ ಎಂಬುದನ್ನು ಅರಿತಿದ್ದೇನೆ ಎಂದರು.

ಐಸಿಟಿಸಿ ಆಪ್ತ ಸಮಾಲೋಚಕ ನಾಗಲಿಂಗಪ್ಪ ಅವರು ಮಾತನಾಡಿ.ಆರೋಗ್ಯವಂತರಾಗಿದ್ದಾಗ ಮಾತ್ರ ನಾವು ಕೆಲಸ ಮಾಡಲು ಸಾಧ್ಯ ಆರೋಗ್ಯವೇ ಭಾಗ್ಯ ಎಂಬಂತೆ ಪ್ರತಿಯೊಬ್ಬರೂ ತಮ್ಮ ತಮ್ಮ ಮನೆಯಲ್ಲಿ ಸ್ವಚ್ಛತೆಯನ್ನು ಕಾಪಾಡಿಕೊಳ್ಳಬೇಕು. ಪ್ರತಿ ಆರು ತಿಂಗಳಿಗೊಮ್ಮೆ ಎಚ್ಐವಿ ಪರೀಕ್ಷೆ,ಕಣ್ಣಿನ ಪರೀಕ್ಷೆ, ಬಿಪಿ ಶುಗರ್ ಪರೀಕ್ಷೆ ಮತ್ತು ಎರಡು ವಾರಕ್ಕಿಂತ ಹೆಚ್ಚು ಕೆಮ್ಮು, ಸಂಜೆ ಜ್ವರ ಬರುವುದು, ಕಫದಲ್ಲಿ ರಕ್ತ ಬರುವುದು, ತೂಕ ಇಳಿಕೆ ಈ ತರ ಲಕ್ಷಣಗಳಿದ್ದಲ್ಲಿ ಕಫದ ಪರೀಕ್ಷೆ ಮಾಡಿಸಿಕೊಳ್ಳಬೇಕು. ಹಾಗೂ ನಿಮ್ಮ ನಿಮ್ಮ ಆರೋಗ್ಯ ನಿಮ್ಮ ಕೈಯಲ್ಲಿ ಎಂಬಂತೆ ನಾವು ಆರೋಗ್ಯವಂತರಾಗಿದ್ದಾಗ ಮಾತ್ರ ನಮ್ಮ ಕುಟುಂಬವನ್ನು ಕಾಪಾಡಿಕೊಳ್ಳಲು ಸಾಧ್ಯವಾಗುತ್ತದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಕ್ಷಯ ರೋಗದ ಮೇಲ್ವಿಚಾರಕರು ಮಹೇಶ ನಾಯಕ, ನೇತ್ರಾಧಿಕಾರಿ ವಾದಿರಾಜ್, ಲ್ಯಾಬ್ ಟೆಕ್ನಿಶನ್ ಚಂದ್ರಕಲಾ, ಎನ್ ಸಿಡಿ ಆಪ್ತ ಸಮಾಲೋಚಕ ಉಮೇಶ, ಶರಣ ಬಸವ, ಮಲ್ಲಿಕಾರ್ಜುನ, ಪಿಹೆಚ್ ಸಿ ಒ ಸುನಿತಾ, ಸಿಎಚ್ ಓ ಸುನಿಲ್ ಕುಮಾರ್,ಹೊಸ ಬೆಳಕು ಎನ್ ಜಿಓ ಸಹಾಯಕ ಮುದುಕಪ್ಪ, ಪಂಡಿತ್, ಸಿದ್ದು,ಗ್ರಾಮ ಪಂಚಾಯತಿ ಸಿಬ್ಬಂದಿಗಳು ಮತ್ತು ಆಶಾ ಅಂಗನವಾಡಿ ಕಾರ್ಯಕರ್ತೆಯರು ಉಪಸ್ಥಿತರಿದ್ದ

# ಸುಶೀಲ್ ಕಾಳೆ ಕೊಲೆ ಆರೋಪಿಗಳ ಮೇಲೆ ಗುಂಡಿನ ದಾಳಿ

**ವಿಜಯಪುರ, ಜು. 15–** ನಿನ್ನೆಯಷ್ಟೇ ನಡೆದ ಸುಶೀಲ್ ಕಾಳೆ ಕೊಲೆ ಪ್ರಕರಣದ ಇಬ್ಬರು ಆರೋಪಿಗಳನ್ನು ಹಿಡಿಯಲು ಹೋದಾಗ ಪೊಲೀಸರ ಮೇಲೆ ಕಲ್ಲು, ಕಂಟ್ರಿ ಪಿಸ್ತೂಲ್ ನಿಂದ ಆರೋಪಿಗಳು ದಾಳಿ ನಡೆಸಿದಾಗ ಪೊಲೀಸರು ಪ್ರತಿಯಾಗಿ ಆರೋಪಿಗಳಿಬ್ಬರ ಮೇಲೆ ಗುಂಡು ಹಾರಿಸಿದ್ದು, ಅವರು ಕಾಲುಗಳಿಗೆ ಗಾಯಗಳಾದ ಘಟನೆ ಇಂದು ಬೆಳಿಗ್ಗೆ 6 ಗಂಟೆ ಸುಮಾರಿಗೆ ಇಟ್ಟಂಗಿಹಾಳ ರಸ್ತೆಯಲ್ಲಿ ನಡೆದಿದೆ.



ಆಕಾಶ ಕಲ್ಲವ್ವಗೋಳ (24), ಸುಭಾಸ ಬಗಲಿ (20) ಗಾಯಗೊಂಡ ಆರೋಪಿಗಳು.ಇಬ್ಬರು ಆರೋಪಿಗಳಿಗೆ ಕಾಲಿಗೆ ಗುಂಡು ತಗಲಿದ್ದು, ಆರೋಪಿಗಳನ್ನು ಜಿಲ್ಲಾ ಆಸ್ಪತ್ರೆಗೆ ಸೇರಿಸ ಲಾಗಿದೆ.ಸುಶೀಲ್ ಕಾಳೆ ಕೊಲೆ ಆರೋಪಿಗಳು ಇಟ್ಟಂಗಿ ಹಾಳ ರಸ್ತೆ ಕಡೆಗೆ ಇರುವ ಬಗ್ಗೆ ಪೊಲೀಸರು ಖಚಿತ ಮಾಹಿತಿ ಪಡೆದು ಸ್ಥಳಕ್ಕೆ ಧಾವಿಸಿದ್ದಾರೆ. ಪೊಲೀಸರು ಆರೋಪಿಗಳ ಬಂಧನಕ್ಕೆ ತೆರಳಿದಾಗ ಆರೋಪಿಗಳು ಪೊಲೀಸರ ಮೇಲೇ ಕಲ್ಲು ತೂರಾಟ ನಡೆಸಿ, ತಮ್ಮ ಬಳಿ ಇದ್ದ ಕಂಟ್ರಿ ಪಿಸ್ತೂಲನಿಂದ ಪೊಲೀಸರತ್ತ ಗುಂಡಿನ ದಾಳಿ ನಡೆಸಿದ್ದಾರೆ.ಆಗ ಆತ್ಮ ರಕ್ಷಣೆಗಾಗಿ ಪೊಲೀಸ್ ಇನಸ್ಪೆಕ್ಟರ್ ಪ್ರದೀಪ ತಳಕೇರಿ ಆರೋಪಿಗಳ ಕಾಲಿಗೆ ನಾಲ್ಕು ಸುತ್ತು ಗುಂಡು ಹಾರಿಸಿದ್ದು, ಆರೋಪಿಗಳಿಬ್ಬರ ಕಾಲಿಗೆ ತಲಾ ಒಂದು ಗುಂಡು ತಗುಲಿದೆ.ಗಾಯಗೊಂಡ ಆರೋ ಪಿಗಳನ್ನು ತಕ್ಷಣ ಜಿಲ್ಲಾ ಆಸ್ಪತ್ರೆಗೆ ದಾಖಿಸಲಾಗಿದೆ. ಆರೋಪಿಗಳ ಪ್ರಾಣಕ್ಕೆ ಯಾವುದೇ ಅಪಾಯವಿಲ್ಲ ಎಂದು ವೈದ್ಯರು ತಿಳಿಸಿದ್ದಾರೆ. ನಗರದ ಎಸ್.ಎಸ್. ರಸ್ತೆಯ ಎಸ್. ಎಸ್. ಕಾಂಪ್ಲೆಕ್ಸ್ ನ ಅಮ ರವರ್ಷಿಣಿ ಸಹಕಾರಿ ಬ್ಯಾಂಕಿನಲ್ಲಿ ಹಾಡಹಗಲೇ ಸುಶೀಲ ಕಾಳೆ ಮೇಲೆ ಹಲ್ಲೆ ನಡೆಸಿ ಪರಾರಿಯಾಗಿದ್ದರು.ಬ್ಯಾಂಕಿನಲ್ಲಿದ್ದ ಈ ಯುವಕನ ಮೇಲೆ ಮಾರಾಕಸ್ತಗಳಿಂದ ನಾಲ್ವರು ಹಲ್ಲೆ ಮಾಡಿದ್ದು ತೀವ್ರವಾಗಿ ರಕ್ತದ ಮಡುವಿನಲ್ಲಿ ಬಿದ್ದಿದ್ದ. ತಕ್ಷಣ ಆತನನ್ನು ಚಿಕಿತ್ಸೆಗಾಗಿ ನಗರದ ಬಿ ಎಲ್ ಡಿ ಇ ಆಸ್ಪತ್ರೆಗೆ ದಾಖ ಲಿಸಲಾ ಯಿತು. ಚಿಂತಾಜನಕ ಸ್ಥಿತಿಯಲ್ಲಿದ್ದ ಯುವಕ ಕಾಳೆ ಚಿಕಿತ್ಸೆ ಫಲಿಸದೆ ಮೃತಪಟ್ಟಿದ್ದರು. ಈ ಸಂಬಂಧ ಗಾಂಧಿ ಚೌಕ ಪೊಲೀಸ್ ಠಾಣೆ ಯಲ್ಲಿ ಪ್ರಕರಣ ದಾಖಲಾಗಿದೆ.

# ವಿಶ್ವಕೌಶಲ್ಯ ಸ್ಪರ್ಧೆ ವಿಜೇತರಿಗೆ ಬಹುಮಾನ ವಿತರಣೆ

**ಬೆಂಗಳೂರು, ಜು.15–** ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಇಂದು ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ ಕರ್ನಾಟಕ ಕೌಶಲ್ಯ ಅಭಿವೃದ್ಧಿ ನಿಗಮದ ವತಿಯಿಂದ ವಿಧಾನಸೌಧದ ಬ್ಯಾಂಕ್ವೆಟ್ ಹಾಲ್ ನಲ್ಲಿ ಆಯೋಜಿಸಲಾಗಿದ್ದ ವಿಶ್ವ ಯುವ ಕೌಶಲ್ಯ ದಿನಾಚರಣೆ 2025 ಹಾಗೂ ವಿಶ್ವ ಕೌಶಲ್ಯ ಸ್ಪರ್ಧೆಯ ವಿಜೇತರಿಗೆ ಬಹುಮಾನ ವಿತರಣೆ ಹಾಗೂ ವೈದ್ಯಕೀಯ ಶಿಕ್ಷಣ ಇಲಾಖೆ ಅಡಿಯಲ್ಲಿ ಬರುವ ಕರ್ನಾಟಕ ರಾಜ್ಯ ಶುಶ್ರೂಷಕ ಪರಿಷತ್ತು ವತಿಯಿಂದ ಆಧಾರ್ ಹಾಗೂ ಡಿಜಿ ಲಾಕರ್ ಇ ಕೆ ವೈ ಸಿ ಮೂಲಕ ಸಮೂಹದ ವರೆಗೆ ನೋಂದಣಿ ಪ್ರಮಾಣ ಪತ್ರಗಳನ್ನು ವಿತರಿಸುವ ತಂತ್ರಜ್ಞಾನವನ್ನು ಲೋಕಾರ್ಪಣೆ ಮಾಡಿದರು.




ವೈದ್ಯಕೀಯ ಶಿಕ್ಷಣ, ಕೌಶಲ್ಯಾಭಿವೃದ್ಧಿ,ಉದ್ಯಮಶೀಲತೆ ಹಾಗೂ ಜೀವನೋಪಾಯ ಸಚಿವ ಡಾ: ಶರಣ ಪ್ರಕಾಶ್ ಪಾಟೀಲ್ , ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಪ್ರಧಾನ ಕಾರ್ಯದರ್ಶಿ ಮೊಹಮ್ಮದ್ ಮೊಹಾಸೀನ್, ಹಾಗೂ ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದ್ದರು

# ವಿಜಯನಗರದ ನೂತನ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಜಾಹ್ನವಿ ಎಸ್

**ಹೊಸಪೇಟೆ (ವಿಜಯನಗರ)ಜು15–** ವಿಜಯನಗರದ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಯಾಗಿದ್ದ ಎಲ್.ಬಿ.ಶ್ರೀಹರಿಬಾಬು ವರ್ಗಾವಣೆಯ ಹಿನ್ನೆಲೆಯಲ್ಲಿ ವಿಜಯನಗರ ಜಿಲ್ಲೆಯ ನೂತನ ಪೊಲೀಸ್ ವರಿಷ್ಠಾಧಿಕಾರಿಯಾಗಿ ಜಾಹ್ನವಿ ಎಸ್ ನಿಯುಕ್ತ ಗೊಂಡಿದ್ದಾರೆ.



2019 ನೇ ಬ್ಯಾಚ್‌ನ ಐಪಿಎಸ್ ಅಧಿಕಾರಿಯಾಗಿದ್ದ ಜಾಹ್ನವಿ ಎಸ್. ಮೈಸೂರಿನ ಡಿಸಿಪಿ ಆಗಿದ್ದರು, ಕಳೆದ 2ವರ್ಷ 8 ತಿಂಗಳಿಂದ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾಗಿ ಕಾರ್ಯ ನಿರ್ವಹಿಸಿದ್ದ ಶ್ರೀಹರಿಬಾಬು ಬೆಂಗಳೂರಿನ ಸಿಸಿಬಿ ಡಿಸಿಪಿಯಾಗಿ ವರ್ಗಾವಣೆಗೊಂಡಿದ್ದಾರೆ.

# ಪಂಚಭೂತಗಳಲ್ಲಿ ಅಭಿನಯ ಸರಸ್ವತಿ ಲೀನ

**ಬೆಂಗಳೂರು,ಜು.15–** ದಶಕಗಳ ಕಾಲ ಬಹುಭಾಷೆಗಳಲ್ಲಿ ನಟಿಸಿದ್ದ ಕನ್ನಡದ ಮೊಟ್ಟ ಮೊದಲ ಸೂಪರ್ ಸ್ಟಾರ್ ನಟಿ ಪ್ರತಿಷ್ಠಿತ ಪದಭೂಷಣ ಪ್ರಶಸ್ತಿ ಪುರಸ್ಕೃತೆ ಬಿ.ಸರೋಜಾದೇವಿ ಅವರು ಪಂಚಭೂತಗಳಲ್ಲಿ ಇಂದು ಲೀನವಾದರು. ಕುಟುಂಬ ಸದಸ್ಯರ ಆಕ್ರಂದನ, ಅಭಿಮಾನಿಗಳ ಭಾರ ಹೃದಯದ ನಡುವೆಯೇ ವಯೋಸಹಜತೆಯಿಂದ ನಿಧನರಾಗಿದ್ದ ಬಿ.ಸರೋಜಾದೇವಿ ಅವರ ಅಂತ್ಯಕ್ರಿಯೆಯನ್ನು ಬೆಂಗಳೂರು ದಕ್ಷಿಣ ಜಿಲ್ಲೆ ಚನ್ನಪಟ್ಟಣ ತಾಲ್ಲೂಕಿನ ಸ್ವಗ್ರಾಮ ದಶವಾರದಲ್ಲಿ ಸಕಲ ಸರ್ಕಾರಿ ಗೌರವಗಳೊಂದಿಗೆ ಒಕ್ಕಲಿಗ ಸಂಪ್ರದಾಯದಂತೆ ನೆರವೇರಿಸಲಾಯಿತು. ಅವರ ಪುತ್ರ ಗೌತಮ್ ಅವರು ಅಂತಿಮ ವಿಧಿವಿಧಾನಗಳನ್ನು ನೆರವೇರಿಸಿಕೊಟ್ಟರು.

ಸುಮಾರು 200ಕ್ಕೂ ಹೆಚ್ಚು ಚಿತ್ರಗಳಲ್ಲಿ ನಟಿಸಿ ದಕ್ಷಿಣ ಭಾರತದಲ್ಲೆ ಅತ್ಯಂತ ಪ್ರಬುದ್ಧ ನಟಿ ಎಂದೇ ಖ್ಯಾತಿಯಾಗಿದ್ದ ಸರೋಜಾದೇವಿ ಇನ್ನು ನೆನಪು ಮಾತ್ರ. ಸರೋಜದೇವಿಯವರ ಕೊನೆಯಾಸೆಯಂತೆ ಹುಟ್ಟೂರಿನಲ್ಲೆ ನನ್ನ ದೇಹ ಮಣ್ಣಾಗಬೇಕೆಂಬ ಇಚ್ಚೆಯಂತೆ ದಶವಾರದಲ್ಲಿರುವ ಅವರ ತೋಟದ ಮನೆಯಲ್ಲಿ ತಾಯಿ ರುದ್ರಮ ಅವರ ಸಮಾಧಿ ಪಕ್ಕದಲೇ ಅಂತ್ಯಕ್ರಿಯೆ ನಡೆಸಲಾಯಿತು. ಚನ್ನಪಟ್ಟಣ ಶಾಸಕ ಸಿ.ಪಿ.ಯೋಗೇಶ್ವರ್ ಸೇರಿದಂತೆ ಹಲವು ಗಣ್ಯರು ಅಂತ್ಯಕ್ರಿಯೆಯಲ್ಲಿ ಭಾಗವಹಿಸಿದ್ದರು.

ಇದಕ್ಕೂ ಮುನ್ನ ಬೆಳಗ್ಗೆ ಮಲ್ಲೇಶ್ವರಂನಲ್ಲಿರುವ ಅವರ ನಿವಾಸದಲ್ಲಿ ಗಣ್ಯರು ಅಂತಿಮ ದರ್ಶನ ಪಡೆದುಕೊಂಡರು. ಮುಖ್ಯಮಂತ್ರಿ ಸಿದ್ದರಾಮಯ್ಯ, ಸಚಿವರಾದ ಎಚ್.ಸಿ.ಮಹದೇವಪ್ಪ, ಜಮೀರ್ ಅಹಮದ್ ಸೇರಿದಂತೆ ಚಿತ್ರರಂಗದ ಅನೇಕ ಗಣ್ಯರು ಅಗಲಿದ ಅಭಿನಯ ಸರಸ್ವತಿಗೆ ಭಾವಪೂರ್ಣ ಶ್ರದ್ಧಾಂಜಲಿ ಅರ್ಪಿಸಿದರು. ನಂತರ ಮಲ್ಲೆ?ಶ್ವರಂ ನಿವಾಸದಿಂದ ವಿಶೇಷ ವಾಹನದಲ್ಲಿ ಮೆರವಣಿಗೆ ಮೂಲಕ ಹುಟ್ಟೂರಿಗೆ ಕೊಂಡಯ್ಯಲಾಯಿತು. ನಗರದ ಪ್ರಮುಖ ಬೀದಿಗಳಲ್ಲಿ ಪಾರ್ಥೀವ ಶರೀರ ಬರುತ್ತಿದ್ದಂತೆ ಅಭಿಮಾನಿಗಳು ಅಂತಿಮ ವಿದಾಯ ಹೇಳಿದರು.

ವಾಹನವು ಬೆಂಗಳೂರಿನ ಮಲ್ಲೇಶ್ವರಂನಿಂದ ಹೊರಟು ಮೈಸೂರು–ಬೆಂಗಳೂರು ಎಕ್ಸ್‌ಪ್ರೆಸ್ ವೇನಲ್ಲಿ ಸಂಚರಿಸಿ ರಾಮನಗರ ತಲುಪಿದೆ. ನಂತರ ಅಲ್ಲಿಂದ ಚನ್ನಪಟ್ಟಣಕ್ಕೆ ಬಂದಾಗ ಸಾರ್ವಜನಿಕ ದರ್ಶನಕ್ಕೆ ಅವಕಾಶ ಕಲ್ಪಿಸಲಾಗಿತ್ತು. ಅಲ್ಲಿನ ಸ್ಥಳೀಯರು ಮೇರುನಟಿಗೆ ಭಾವಪೂರ್ಣ ಶ್ರದ್ಧಾಂಜಲಿ ಸಲ್ಲಿಸಿದರು.

ನಂತರ ಹುಟ್ಟೂರು ದಶವಾರಕ್ಕೆ ಮಧ್ಯಾಹ್ನದ ವೇಳೆಗೆ ಆಗಮಿಸುತ್ತಿದ್ದಂತೆ ಗಾಂಧಿಭವನದಲ್ಲಿ ಒಂದು ಗಂಟೆ ಕಾಲ ಸಾರ್ವಜನಿಕರ ದರ್ಶನಕ್ಕೆ ಅವಕಾಶ ಕಲ್ಪಿಸಿಕೊಡಲಾಯಿತು. ಸಕಲ ಸರ್ಕಾರಿ ಗೌರವಗಳೊಂದಿಗೆ ಮೇರುನಟಿಗೆ ಪೊಲೀಸರು ಗಾಳಿಯಲ್ಲಿ ಮೂರು ಸುತ್ತಿನ ಕುಶಾಲು ತೋಪು ಸಿಡಿಸಿ ಅಂತಿಮ ನಮನ ಸಲ್ಲಿಸಿದರು.

ಕನ್ನಡ ಚಿತ್ರರಂಗದ ಹಿರಿಯ ನಟಿ ಬಿ.ಸರೋಜಾದೇವಿ ಅವರು ಸಾವಿನಲ್ಲೂ ಸಾರ್ಥಕತೆ ಮೆರೆದಿದ್ದಾರೆ. ಮನುಷ್ಯನ ಪಂಚೇಂದ್ರಿಯಗಳಲ್ಲಿ ಕಣ್ಣು ಪ್ರಮುಖವಾದದ್ದು. ನೇತ್ರ ದಾನ ಮಾಡುವ ಮೂಲಕ ಅಂಧರಿಗೆ ದೃಷ್ಟಿ ನೀಡಿ ಅವರ ಬಾಳಿಗೆ ಬೆಳಕಾಗಿದ್ದಾರೆ. ಬೆಂಗಳೂರಿನ ನಾರಾಯಣ ನೇತ್ರಾಲಯಕ್ಕೆ ನೇತ್ರದಾನ ಮಾಡಿದ್ದರು. ಅದರಂತೆ ವೈದ್ಯರ ತಂಡ ಮಲ್ಲೆ?ಶ್ವರಂನಲ್ಲಿರುವ ಮನೆಗೆ ಆಗಮಿಸಿ ನೇತ್ರದಾನ ಪ್ರಕ್ರಿಯೆಯನ್ನ ಪೂರ್ಣಗೊಳಿಸಿದ್ದರು.

ವರನಟ ಡಾ.ರಾಜ್‌ಕುಮಾರ್, ಪುನೀತ್ ರಾಜ್‌ಕುಮಾರ್ ಕೂಡ ನೇತ್ರದಾನ ಮಾಡಿದ್ದರು. ಪುನೀತ್ ರಾಜ್‌ಕುಮಾರ್ ಅವರ ಅಕಾಲಿಕ ಮರಣದ ನಂತರ ಅವರ ಕಣ್ಣುಗಳನ್ನು ನಾರಾಯಣ ನೇತ್ರಾಲಯದಲ್ಲಿ ಇಬ್ಬರು ಅಂಧರಿಗೆ ಅಳವಡಿಸಲಾಗಿದೆ. ಆ ಮೂಲಕ ಇಬ್ಬರ ಬಾಳಿಗೆ ಪುನೀತ್ ರಾಜ್‌ಕುಮಾರ್ ಬೆಳಕಾಗಿದ್ದಾರೆ. ಇದೀಗ ರಾಜ್‌ಕುಮಾರ್, ಪುನೀತ್ ಅವರ ಹಾದಿಯಾಗಿ ಸರೋಜಾದೇವಿ ಅವರೂ ನೇತ್ರದಾನ ಮಾಡಿದ್ದು, ಬದುಕಿನ ಪಯಣ ಮುಗಿಸಿದ್ದಾರೆ.

ಬಿ.ಸರೋಜಾ ದೇವಿ ಅವರು 1938 ಜನವರಿ 7ರಂದು ಜನಿಸಿದ್ದರು. 17ನೇ ವಯಸ್ಸಿನಲ್ಲಿ ಮಹಾಕವಿ ಕಾಳಿದಾಸ ಚಿತ್ರದ ಮೂಲಕ ಕನ್ನಡ ಚಿತ್ರರಂಗಕ್ಕೆ ಕಾಲಿಟ್ಟರು. ಹಿರಿಯ ನಟಿ ಸರೋಜಾ ದೇವಿ ಅವರಿಗೆ ಹಲವು ಪ್ರಶಸ್ತಿಗಳು ಕೂಡ ಲಭಿಸಿತ್ತು. 1969ರಲ್ಲಿ ಪದಶ್ರೀ,1992 ರಲ್ಲಿ ಪದಭೂಷಣ ಪ್ರಶಸ್ತಿ ಲಭಿಸಿತ್ತು.



ವಯೋಸಜಹಜ ಕಾಯಿಲೆಯಿಂದ ಬಳಲುತ್ತಿದ್ದ ಬಿ.ಸರೋಜಾದೇವಿ ಬೆಂಗಳೂರಿನ ಮಲ್ಲೇಶ್ವರಂನಲ್ಲಿರುವ ತಮ ನಿವಾಸದಲ್ಲಿ ನಿನ್ನೆ ಬೆಳಗ್ಗೆ ಕೊನೆಯುಸಿರೆಳೆದಿದ್ದರು. ಸುಮಾರು 6 ದಶಕಗಳ ಕಾಲ ಚಿತ್ರರಂಗಕ್ಕೆ ಸೇವೆ ಸಲ್ಲಿಸಿರುವ ಸರೋಜಾದೇವಿ ಅವರು ಕನ್ನಡ ಮಾತ್ರವಲ್ಲದೆ ತಮಿಳು, ತೆಲುಗು, ಹಿಂದಿ ಮತ್ತು ಮಲಯಾಳಂ ಭಾಷೆಗಳಲ್ಲೂ ನಟಿಸಿದ್ದರು. 5 ಭಾಷೆಗಳಲ್ಲಿ 200ಕ್ಕೂ ಹೆಚ್ಚು ಚಿತ್ರಗಳಲ್ಲಿ ಅಭಿನಯಿಸಿದ್ದರು.

ಸರೋಜಾದೇವಿ ಎಂದಾಕ್ಷಣ ಕಿತ್ತೂರು ಚೆನ್ನಮ, ಬಬ್ರುವಾಹನ, ಭಾಗ್ಯವಂತರು, ಅಣ್ಣತಂಗಿ ಮುಂತಾದ ಚಿತ್ರಗಳಲ್ಲಿನ ಅವರ ಮನೋಜ್ಞ ಅಭಿನಯ ಕಣ್ಣಮುಂದೆ ಬರುತ್ತದೆ. ಕನ್ನಡ ಚಿತ್ರರಂಗದ ಕಿತ್ತೂರು ರಾಣಿ ಚೆನ್ನಮ ಅಂತಲೇ ಎಲ್ಲರ ಮನದಲ್ಲಿ ಮನೆ ಮಾಡಿದ್ದ ಸರೋಜಾದೇವಿ ಅವರು ತಮ ನಿವಾಸದಲ್ಲಿ ಉಸಿರು ಚೆಲ್ಲಿದ್ದಾರೆ. ಹಿರಿಯ ನಟಿಯ ನಿಧನಕ್ಕೆ ಸಿನಿಮಾರಂಗದ ಗಣ್ಯರು, ರಾಜಕೀಯ ನಾಯಕರು ಕಂಬನಿ ಮಿಡಿದಿದ್ದಾರೆ,.

**ಮೇರುನಟಿ:**ಬಿ.ಸರೋಜಾ ದೇವಿ ಒಬ್ಬ ಮೇರು ನಟಿ. ಪಂಚಭಾಷಾ ತಾರೆಯಾಗಿ ಕನ್ನಡ, ತಮಿಳು, ತೆಲುಗು, ಮಲಯಾಳಂ, ಹಿಂದಿ ಭಾಷೆಗಳಲ್ಲಿ ಪಾತ್ರಗಳನ್ನು ಮಾಡಿ ಸೈ ಎನಿಸಿಕೊಂಡಿದ್ದ ಅದ್ಭುತ ನಟಿ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು. ಮಲ್ಲೇಶ್ವರಂನ 11ನೇ ಅಡ್ಡರಸ್ತೆಯಲ್ಲಿರುವ ಮೃತರ ನಿವಾಸದಲ್ಲಿ ಪ್ರಾರ್ಥಿವ ಶರೀರಕ್ಕೆ ಅಂತಿಮ ನಮನ ಸಲ್ಲಿಸಿದ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬಹುಭಾಷಾ ನಟಿ ಬಿ.ಸರೋಜಾದೇವಿ ಅವರ ನಿಧನ ಇಡೀ ಚಿತ್ರರಂಗಕ್ಕೆ ದೊಡ್ಡ ಆಘಾತ ಉಂಟು ಮಾಡಿದೆ.

ಚಿಕ್ಕವಯಸ್ಸಿನಲ್ಲಿಯೇ ಸಿನಿಮಾರಂಗ ಪ್ರವೇಶಿಸಿ ಏಳು ದಶಕಗಳ ಕಾಲ ಕಲಾವಿದೆಯಾಗಿದ್ದವರು. ಅಭಿನಯ ಸರಸ್ವತಿ ಎಂಬ ಬಿರುದು ಚಿಕ್ಕವಯಸ್ಸಿಗೆ ದೊರೆತಿತ್ತು. ಎಲ್ಲಾ ಭಾಷೆಯ ಹೆಸರಾಂತ ನಟರೊಂದಿಗೆ ನಟಿಸಿದ್ದರು. ದಿಲೀಪ್‌ಕುಮಾರ್, ರಾಜೇಂದ್ರಕುಮಾರ್, ದೇವ್ ಆನಂದ್, ಎಂ.ಜಿ.ಆರ್, ಎನ್.ಟಿ.ಆರ್, ಶಿವಾಜಿ ಗಣೇಶನ್, ರಾಜ್‌ಕುಮಾರ್ ಅವರೊಂದಿಗೂ ಅನೇಕ ಚಿತ್ರಗಳಲ್ಲಿ ನಟಿಸಿದ್ದರು ಎಂದು ಸರಿಸಿದರು.

ಯಾವುದೇ ಪಾತ್ರಕ್ಕೂ ಜೀವ ತುಂಬುತ್ತಿದ್ದರು. ಶಿಸ್ತುಬದ್ಧ ಜೀವನ ನಡೆಸಿದವರು. ಕನ್ನಡ ಚಿತ್ರರಂಗ ಬೆಳೆಯಲು ಅಪಾರ ಕೊಡುಗೆ ಕೊಟ್ಟಿದ್ದಾರೆ. ಅವರ ಸಾವಿನಿಂದ ಚಿತ್ರರಂಗಕ್ಕೆ ಅಪಾರ ನಷ್ಟವಾಗಿದೆ. ಅವರ ಆತಕ್ಕೆ ಚಿರಶಾಂತಿ ದೊರಕಲಿ ಹಾಗೂ ದೇವರು ಅವರ ಕುಟುಂಬ ವರ್ಗದವರಿಗೆ ದುಃಖ ಭರಿಸುವ ಶಕ್ತಿ ನೀಡಲಿ ಎಂದು ಪ್ರಾರ್ಥಿಸುವುದಾಗಿ ತಿಳಿಸಿದರು.

ಸರೋಜಾದೇವಿ ಅವರ ಅಂತ್ಯಸಂಸ್ಕಾರವನ್ನು ಸಕಲ ಸರ್ಕಾರಿ ಗೌರವದೊಂದಿಗೆ ಅವರ ಹುಟ್ಟೂರಿನಲ್ಲಿ ನಡೆಯುತ್ತದೆ ಎಂದು ಹೇಳಿದರು.

ಅನೇಕ ಬಾರಿ ಸರೋಜಾದೇವಿಯವರನ್ನು ಭೇಟಿ ಮಾಡಿದ್ದೇನೆ. ಎಲ್ಲರೊಂದಿಗೆ ಆತ್ಮೀಯವಾಗಿ, ಪ್ರೀತಿಯಿಂದ ಮಾತನಾಡುತ್ತಿದ್ದರು. ಅವರ ಸಿನಿಮಾಗಳಲ್ಲಿ ಮಲ್ಲಮನ ಪವಾಡ, ಕಿತ್ತೂರು ಚೆನ್ನಮ, ಭಾಗ್ಯವಂತರು, ಬಬ್ರುವಾಹನ, ನ್ಯಾಯವೇ ದೇವರು ಸೇರಿದಂತೆ ಅನೇಕ ಚಿತ್ರಗಳನ್ನು ನೋಡಿರುವುದಾಗಿ ತಿಳಿಸಿದರು.ಸರೋಜಾದೇವಿಯವರ ಹೆಸರನ್ನು ಅವರು ವಾಸಿಸುತ್ತಿದ್ದ ರಸ್ತೆಗೆ ಇಡಬೇಕೆಂಬ ಆಸೆಯಿತ್ತು ಎಂಬ ಸುದ್ದಿಗಾರರ ಪ್ರಶ್ನೆಗೆ ಉತ್ತರಿಸಿದ ಸಿದ್ದರಾಮಯ್ಯ, ಈ ಬಗ್ಗೆ ಬಿಬಿಎಂಪಿಯೊಂದಿಗೆ ಚರ್ಚೆ ನಡೆಸುವುದಾಗಿ ಹೇಳಿದರು.

# ದೃಷ್ಟಿ ಇಲ್ಲದ ಪ್ರಯಾಣಿಕರ ಅನುಕೂಲಕ್ಕಾಗಿ ಧ್ವನಿ ಸ್ಪಂದನ ಡಿವೈಸ್ ಅಳವಡಿಕೆ ಯೋಜನೆಗೆ ಚಾಲನೆ



**ಮೈಸೂರು,ಜು.15–** ಅಂಧ ಪ್ರಯಾಣಿಕರ ಸರಳ ಪ್ರಯಾಣಕ್ಕಾಗಿ ರಾಜ್ಯ ಸಾರಿಗೆ ಇಲಾಖೆ ವಿನೂತನ ಪ್ರಯತ್ನಕ್ಕೆ ಮುಂದಾಗಿದ್ದು ಸಾರಿಗೆ ಬಸ್‌ಗಳಿಗೆ ಧ್ವನಿ ಸ್ಪಂದನ ಡಿವೈಸ್ ಅಳವಡಿಕೆ ಯೋಜನೆಗೆ ಸಾರಿಗೆ ಸಚಿವ ರಾಮಲಿಂಗರೆಡ್ಡಿ ಚಾಲನೆ ನೀಡಿದರು.ಮೈಸೂರಿನ ಸಿಟಿ ಬಸ್ ನಿಲ್ದಾಣದಲ್ಲಿ ನೂತನ ಯೋಜನೆ ಸಾರಿಗೆ ಸಚಿವ ರಾಮಲಿಂಗರೆಡ್ಡಿ ಚಾಲನೆ ಕೊಟ್ಟರು.

ಅಂಧ ಪ್ರಯಾಣಿಕರಿಗೆ ಅನುಕೂಲವಾಗುವಂತೆ ಸಾರಿಗೆ ಬಸ್ ಗಳಿಗೆ ಧ್ವನಿ ಸ್ಪಂದನ ಡಿವೈಸ್ ಅಳವಡಿಕೆ ಮಾಡಲಾಗಿದ್ದು, ಈ ಡಿವೈಸ್ ಧ್ವನಿ ವರ್ಧಕ ಸಾಧನದ ಮೂಲಕ ಹೋಗುವ ರೂಟ್ ಬಗ್ಗೆ ಮಾಹಿತಿ ನೀಡಲಿದೆ. ಬಸ್ ನಿಂತ ಸ್ಥಳಕ್ಕೆ ಅಂಧರ ಕರೆದೊಯ್ಯುವ ಸಾಧನ ಇದಾಗಿದೆ. ಬಸ್ ನಿಲ್ದಾಣದ 30 ಮೀಟರ್ ಒಳಗೆ ಬಸ್‌ಗಳ ಮಾಹಿತಿ ನೀಡಲಿದೆ. ಮೈಸೂರು ನಗರದ 77 ಮಾರ್ಗಗಳ ಸುಮಾರು 200ಕ್ಕೂ ಹೆಚ್ಚು ಬಸ್‌ಗಳಿಗೆ ಈ ಡಿವೈಸ್ ಅಳವಡಿಕೆ ಮಾಡಲಾಗಿದೆ.

ಚಾಲನೆ ನೀಡಿದ ಬಳಿಕ ಮಾತನಾಡಿದ ಸಚಿವ ರಾಮಲಿಂಗರೆಡ್ಡಿ, ರೇಡಿಯೋ ಫ್ರೀಕ್ವೆನ್ಸಿಯ ಧ್ವನಿ ವರ್ಧಕದ ಮೂಲಕ ಬಸ್ ಇರುವ ಜಾಗಕ್ಕೆ ಕಂಡುಕೊಳ್ಳುವ ಸಾಧನೆ. ಅಂಧರಿಗೆ ಅನುಕೂಲವಾಗುವ ನಿಟ್ಟಿನಲ್ಲಿ ಬಸ್ ಗಳಲ್ಲಿ ಹೊಸ ತಂತ್ರಜ್ಞಾನ ತಂದಿದ್ದೇವೆ. ಬಟನ್ ಒತ್ತಿದರೆ ಆ ಬಸ್ ಎಲ್ಲಿ ಹೋಗುತ್ತೆ ಅಂತ ಮಾಹಿತಿ ಸಿಗುತ್ತೆ. ದೆಹಲಿ ಮತ್ತು ಮುಂಬೈ ನಗರದಲ್ಲಿ ಈ ವ್ಯವಸ್ಥೆಯಿದೆ. ಈಗ ದೇಶದಲ್ಲಿ ದೊಡ್ಡ ಮಟ್ಟದಲ್ಲಿ ಈ ವ್ಯವಸ್ಥೆಯನ್ನು ಮೈಸೂರಿನಲ್ಲಿ ಮಾಡಿದ್ದೇವೆ.

200 ಬಸ್ ಗಳಲ್ಲಿ ಈಗಾಗಲೇ ಈ ವ್ಯವಸ್ಥೆ ಮಾಡಲಾಗಿದೆ ಎಂದು ತಿಳಿಸಿದರು. ಯಾವ ಕ್ರಾಂತಿಯೂ ಇಲ್ಲ ರಾಜ್ಯದಲ್ಲಿ ಸಿಎಂ ಬದಲಾವಣೆ, ಸೆಪ್ಟೆಂಬರ್ ಬಳಿಕ ಕ್ರಾಂತಿ ವಿಚಾರ ಕುರಿತು ಪ್ರತಿಕ್ರಿಯಿಸಿದ ಸಚಿವ ರಾಮಲಿಂಗರೆಡ್ಡಿ, ಯಾವ ಕ್ರಾಂತಿಯೂ ಇಲ್ಲ ಎಲ್ಲದಕ್ಕೂಸಿಎಂ ಸಿದ್ದರಾಮಯ್ಯನವರೇ ಫುಲ್ ಸ್ಟಾಪ್ ಹಾಕಿದ್ದಾರೆ. ನಾನೇ ಐದು ವರ್ಷ ಮುಖ್ಯಮಂತ್ರಿ ಅಂತ ಘೋಷಣೆ ಮಾಡಿದ್ದಾರೆ. ಉಪಮುಖ್ಯಮಂತ್ರಿ ಕೂಡ ಪಕ್ಷ ಏನು ಹೇಳುತ್ತೆ ಅದನ್ನಪಾಲಿಸುತ್ತೇನೆ ಎಂದಿದ್ದಾರೆ. ಇದರ ಬಗ್ಗೆ ನಮ್ಮ ಶಾಸಕರು, ಸಚಿವರು ಪದೆ ಪದೆ ಮಾತನಾಡದಿದ್ದರೆ ಪಕ್ಷಕ್ಕೆ ಒಳ್ಳೆಯದು ಎಂದರು.

ಸುರ್ಜೇವಾಲ ಶಾಸಕರ ಅಹವಾಲು ಕೇಳಿದ್ದಾರೆ. ಯಾವ ಮಂತ್ರಿ ಬಗ್ಗೆ ನೀವು ದೂರು ಬಂದಿದೆ ಗೊತ್ತಿಲ್ಲ. ಎಲ್ಲವನ್ನೂ ಪಕ್ಷದ ಹೈಕಮಾಂಡ್ ಸರಿ ಮಾಡುತ್ತದೆ ಎಂದು ರಾಮಲಿಂಗರೆಡ್ಡಿ ತಿಳಿಸಿದರು.ಹೊರಗಿನಿಂದ ಬಂದು ಸಿದ್ದರಾಮಯ್ಯ 2 ಬಾರಿ ಸಿಎಂ ಆದರು ಎಂಬ ಕಾಂಗ್ರೆಸ್ ಕೆಲ ನಾಯಕರ ವಿಚಾರ ಕುರಿತು ಪ್ರತಿಕ್ರಿಯಿಸಿದ ರಾಮಲಿಂಗರೆಡ್ಡಿ, ಎಲ್ಲಿಂದ ಬಂದಿದ್ದರೂ ಅವರು ಈಗ

ಕಾಂಗ್ರೆಸ್ ನಾಯಕರು. ಅವರು ಜನಪ್ರಿಯ ನಾಯಕರಾಗಿದ್ದರು.

ಮಾಸ್ ಲೀಡರ್, ಹಾಗಾಗಿ ಸಿಎಂ ಆದರು. ಸಿಎಂ ಆಗಿ ಜನರಿಗೆ ಒಳ್ಳೆಯ ಕೆಲಸ ಮಾಡಿಲ್ಲಾ ಎಂದು ಪ್ರಶ್ನಿಸಿದರು. ಅವರು ಸಿಎಂ ಆಗ್ತಾರೆ, ಯಾವಾಗ ಏನು ಗೊತ್ತಿಲ್ಲ ಡಿ.ಕೆ.ಶಿವಕುಮಾರ್ ಸಿಎಂ ಆಗುವ ವಿಚಾರ ಕುರಿತು ಪ್ರತಿಕ್ರಿಯಿಸಿದ ಸಚಿವ ರಾಮಲಿಂಗರೆಡ್ಡಿ, ಡಿಕೆಶಿ ಹುಟ್ಟು ಕಾಂಗ್ರೆಸಿಗರು, ವಿದ್ಯಾರ್ಥಿ ದೆಸೆಯಿಂದಲೇ ಕಾಂಗ್ರೆಸ್‌ನಲ್ಲಿ ತಮ್ಮನ್ನು ತೊಡಗಿಸಿಕೊಂಡಿದ್ದಾರೆ. ಅವರು ಸಿಎಂ ಆಗ್ತಾರೆ, ಯಾವಾಗ ಏನು ಗೊತ್ತಿಲ್ಲ. ಅದಕ್ಕೂ ಕಾಲ ಬರುತ್ತದೆ ಎಂದರು.

# ವಿದೇಶಿ ತೊಗರಿ ಆಮದು:ಕೇಂದ್ರದ ಒಪ್ಪಂದಕ್ಕೆ ಪ್ರಿಯಾಂಕ್ ಖರ್ಗೆ ಅಸಮಾಧಾನ

**ಕಲಬುರಗಿ,ಜು.15–** ರಾಜ್ಯದಲ್ಲಿ ಉತ್ಪನ್ನವಾಗುತ್ತಿರುವ ತೊಗರಿಯನ್ನು ನಿರ್ಲಕ್ಷಿಸಿ ವಿದೇಶದಿಂದ ಆಮದು ಮಾಡಿಕೊಳ್ಳುವ ಕೇಂದ್ರದ ಒಪ್ಪಂದಕ್ಕೆ ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ್ ರಾಜ್ ಸಚಿವ ಪ್ರಿಯಾಂಕ್ ಖರ್ಗೆ ತೀವ್ರ ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಈ ಬಗ್ಗೆ ತಮ್ಮ ಎಕ್ಸ್ ಖಾತೆಯಲ್ಲಿ ಬರೆದುಕೊಂಡಿರುವ ಅವರು, ದೇಶದಲ್ಲಿಯೇ ಕರ್ನಾಟಕ ಅತಿಹೆಚ್ಚು ತೊಗರಿ ಉತ್ಪಾದಿಸುವ ರಾಜ್ಯವಾಗಿದೆ. ರಾಜ್ಯದ ಉತ್ಪಾದನೆಯಲ್ಲಿ ಶೇಕಡಾ 40 ಪ್ರಮಾಣದ ತೊಗರಿ ಕಲಬುರಗಿ ಜಿಲ್ಲೆಯಲ್ಲಿ ಒಂದರಲ್ಲೇ ಬೆಳೆಯುತ್ತಿದ್ದು ತನ್ನ ಉತ್ಕೃಷ್ಟ ಗುಣಮಟ್ಟದಿಂದಾಗಿ ಭೌಗೋಳಿಕ ಸೂಚಕ ಟ್ಯಾಗ್ ಹೊಂದಿರುವುದು ಗಮನಾರ್ಹ.

2024–25 ರ ಸಾಲಿನಲ್ಲಿ ಭಾರತ 35 ಲಕ್ಷ ಮೆಟ್ರಿಕ್ ಟನ್ ತೊಗರಿ ಉತ್ಪಾದಿಸಿದೆ. ಆದರೆ, ಈ ಉತ್ಪಾದನೆಯಲ್ಲಿ ಕೇಂದ್ರ ಸರ್ಕಾರ ಕೇವಲ ಶೇ.10 ಮಾತ್ರ ಸಂಗ್ರಹಿಸಿದೆ. ಇದು ಕರ್ನಾಟಕದ ರೈತರು ತಾವು ಬೆಳೆದ 10 ಲಕ್ಷ ಕ್ವಿಂಟಾಲ್ ತೊಗರಿಯನ್ನು ನಿಗದಿಪಡಿಸಿದ ರೂ 7,550 ಕನಿಷ್ಠ ಬೆಂಬಲ ಬೆಲೆಗಿಂತ ಕಡಿಮೆ ಬೆಲೆಗೆ ಅಂದರೆ ರೂ 6,000 ಕ್ಕೆ ಒತ್ತಾಯಪೂರ್ವಕವಾಗಿ ಮಾರಾಟ ಮಾಡುವಂತಾಗಿತ್ತು. ಇದರಿಂದಾಗಿ ನಮ್ಮ ರೈತರು ರೂ 1,550 ಕೋಟಿ ನಷ್ಟ ಅನುಭವಿಸುವಿಸಿದರು.

ಈ ವರ್ಷದ ಕನಿಷ್ಠ ಬೆಂಬಲ ಬೆಲೆ ರೂ 8,000 ನಿಗದಿಯಾಗಿದೆ. ಆದರೆ ತೊಗರಿ ಬೆಲೆ ರೂ 6,250 ಕ್ಕೆ ಕುಸಿದಿದೆ. ಇದು ಕಳೆದ ಎರಡು ವರ್ಷದ ದರಗಳ



ಅರ್ಧದಷ್ಟಾಗಿದೆ. ಇದಕ್ಕೆ ಕೇಂದ್ರ ಸರ್ಕಾರದ ತೊಗರಿ ಆಮದು ನಿರ್ಧಾರ ಕಾರಣವಾಗಿದೆ. ಮೇ 2021 ರಿಂ ದ ತೊಗರಿ ಆಮದು ಸುಂಕ ಮುಕ್ತವಾ ಗಿ ದ್ದು, ಮಾರ್ಚ್ 2026 ರವರೆಗೆ ಈ ವಿನಾಯಿತಿ ವಿಸ್ತರಿಸಲಾಗಿದೆ. 2024–25 ನೆ ಸಾಲಿನಲ್ಲಿ 13 ಲಕ್ಷ ಮೆಟ್ರಿಕ್ ಟನ್ ಗೂ ಹೆಚ್ಚು ವಿದೇಶಿ ತೊಗರಿ ಆಮದು ಮಾಡಿ ಕೊಳ್ಳಲಾಯಿತು. ಇದಲ್ಲದೇ ಮೊಜಾಂಬಿಯಾ ದೇಶದಿಂದ ಇನ್ನೂ 2 ಲಕ್ಷ ಮೆಟ್ರಿಕ್ ಟನ್ ತೊಗರಿ ಆಮದು ಮಾಡಿಕೊಳ್ಳಲು ಒಪ್ಪಂದಕ್ಕೆ ಕೇಂದ್ರ ಸಹಿಹಾಕಿದ್ದು ಇದು ಆಘಾತಕಾರಿಯಾಗಿದೆ.

ಕರ್ನಾಟಕ ರಾಜ್ಯ ಉತ್ಪಾದನಾ ವೆಚ್ಚ ರೂ 11,032 ಸೇರಿದಂತೆ ರೂ 16,548 ಕನಿಷ್ಠ ಬೆಂಬಲ ಬೆಲೆಯ ಬೇಡಿಕೆಯನ್ನು ಸರ್ಕಾರದ ಮುಂದಿಟ್ಟಿತ್ತು. ಆದರೆ ಕೇಂದ್ರ ರೂ 8,000 ಕ್ಕೆ ನಿಗದಿಪಡಿಸಿರುವ ಕುರಿತು ಕೇಂದ್ರದ ಕೃಷಿ ವೆಚ್ಚಗಳು ಹಾಗೂ ಬೆಲೆಗಳ ಆಯೋಗ ತನ್ನ ವರದಿಯಲ್ಲಿ ಒಪ್ಪಿಕೊಂಡಿದೆ.ಕರ್ನಾಟಕದ ಬಿಜೆಪಿಯ ಕೇಂದ್ರ ಸಚಿವರು ತಾವು ಪ್ರತಿನಿಧಿಸುವ ರಾಜ್ಯದ ಹಿತಾಸಕ್ತಿಗಳ ಪರವಾಗಿ ನಿಲ್ಲುವ ಬದಲು ದ್ವೇಷವನ್ನು ಹರಡುವುದರ ಮೇಲೆ ಹೆಚ್ಚು ಗಮನಹರಿಸಿದ್ದಾರೆ ಎಂದು ಸಚಿವ ಖರ್ಗೆ ಹರಿಹಾಯ್ದಿದ್ದಾರೆ.

# ವಿದ್ಯಾರ್ಥಿನಿ ಮೇಲೆ ಅತ್ಯಾಚಾರವೆಸಗಿದ ಆರೋಪ; ಇಬ್ಬರು ಉಪನ್ಯಾಸಕರು ಸೇರಿ ಮೂವರ ಬಂಧನ



**ಬೆಂಗಳೂರು,ಜು.15–** ವಿದ್ಯಾರ್ಥಿನಿ ಮೇಲೆ ನಿರಂತರವಾಗಿ ಅತ್ಯಾಚಾರ ವೆಸಗಿದ ಆರೋಪದ ಮೇಲೆ ದಕ್ಷಿಣ ಕನ್ನಡ ಜಿಲ್ಲೆಯ ಮೂಡಬಿದರೆ ಕಾಲೇಜೊಂದರ ಇಬ್ಬರು ಉಪನ್ಯಾಸಕರು ಹಾಗೂ ಸ್ನೇಹಿತನನ್ನು ಮಾರತಹಳ್ಳಿ ಠಾಣೆ ಪೊಲೀಸರು ಬಂಧಿಸಿದ್ದಾರೆ.

ಭೌತಶಾಸ್ತ್ರ ಉಪನ್ಯಾಸಕ ನರೇಂದ್ರ, ಜೀವಶಾಸ್ತ್ರ ಉಪನ್ಯಾಸಕ ಸಂದೀಪ್ ಹಾಗೂ ಅವರ ಸ್ನೇಹಿತ ಅನೂಪ್ ಬಂಧಿತರು.ನೋಟ್ಸ್ ಕೊಡುವ ನೆಪದಲ್ಲಿ ವಿದ್ಯಾರ್ಥಿನಿ ಜೊತೆ ನರೇಂದ್ರ ಹತ್ತಿರವಾಗಿದ್ದು, ತದ ನಂತರದಲ್ಲಿ ಸಲಹೆ ಬೆಳೆಸಿಕೊಂಡು ಹಂತ ಹಂತವಾಗಿ ಚಾಟ್ ಮಾಡುತ್ತಿದ್ದನು.

ವಿದ್ಯಾರ್ಥಿನಿ ಬೆಂಗಳೂರಿಗೆ ಬಂದ ನಂತರವೂ ಚಾಟ್ ಮಾಡುವುದು ನಿಲ್ಲಿಸಿರಲಿಲ್ಲ. ನೋಟ್ಸ್ ಕೊಡುವ ನೆಪದಲ್ಲಿ ಮಾರತಹಳ್ಳಿಯಲ್ಲಿರುವ ಸ್ನೇಹಿತನ ರೂಂ ಗೆ ವಿದ್ಯಾರ್ಥಿನಿಯನ್ನು ಕರೆಸಿಕೊಂಡು ಅತ್ಯಾಚಾರವೆಸಗಿದ್ದು, ಈ ವಿಚಾರ ಯಾರಿಗೂ ಹೇಳದಂತೆ ಬೆದರಿಕೆ ಹಾಕಿದ್ದಾನೆ. ಅಲ್ಲದೇ ಉಪನ್ಯಾಸಕ ಸಂದೀಪ್ ಸಹ ವಿದ್ಯಾರ್ಥಿನಿ ಮೇಲೆ ಅತ್ಯಾಚಾರಕ್ಕೆ ಯತ್ನಿಸಿದ್ದಾಗ ಆಕೆ ವಿರೋಧ ವ್ಯಕ್ತಪಡಿಸಿದಾಗ ನರೇಂದ್ರನ ಜೊತೆ ನೀನು ಇರುವ ಫೋಟೋ, ವಿಡಿಯೋ ನನ್ನ ಬಳಿ ಇದೆ ಎಂದು ಬ್ಲ್ಯಾಕ್‌ಮೇಲ್ ಮಾಡಿ ಅತ್ಯಾಚಾರವೆಸಗಿದ್ದಾನೆ.

ಘಟನೆ ಬೆನ್ನಲ್ಲೇ ವಿದ್ಯಾರ್ಥಿನಿಯನ್ನು ಸಂಪರ್ಕಿಸಿದ ಅನೂಪ್, ನೀನು ನನ್ನ ರೂಂಗೆ ಬಂದಿರುವುದು ಸಿಸಿ ಟಿವಿಯಲ್ಲಿ ಸೆರೆಯಾಗಿದೆ ಎಂದು ಬೆದರಿಕೆ ಹಾಕಿ ಅತ್ಯಾಚಾರವೆಸಗಿದ್ದಾನೆ.ತನಗಾದ ಅನ್ಯಾಯವನ್ನು ಎದುರಿಸಲು ಸಾಧ್ಯವಾಗದೇ ವಿದ್ಯಾರ್ಥಿನಿ ಸುಮ್ಮನಾಗಿದ್ದಳು. ತದ ನಂತರದಲ್ಲಿ ಉಪನ್ಯಾಸಕರಿಂದಲೇ ಸಮಸ್ಯೆ ಹೆಚ್ಚಾದಾಗ ಪೋಷಕರ ಬಳಿ ಹೇಳಿಕೊಂಡಿದ್ದಾಳೆ. ಪೋಷಕರು ಮಹಿಳಾ ಆಯೋಗಕ್ಕೆ ಮಗಳನ್ನು ಕರೆದೊಯ್ದು ನಂತರ ಪೊಲೀಸರಿಗೆ ದೂರು ಕೊಡಿಸಿದ್ದಾರೆ.

ಪ್ರಕರಣ ದಾಖಲಿಸಿಕೊಂಡು ತನಿಖೆ ಕೈಗೊಂಡ ಪೊಲೀಸರು ಇದೀಗ ಮೂವರನ್ನು ಬಂಧಿಸಿ, ತನಿಖೆ ಮುಂದುವರೆಸಿದ್ದಾರೆ. ಈ ಹಿಂದೆಯೂ ಸಹ ಈ ಇಬ್ಬರು ಉಪನ್ಯಾಸಕರು ಕೆಲವು ವಿದ್ಯಾರ್ಥಿಗಳ ಮೇಲೆ ಅತ್ಯಾಚಾರವೆಸಗಿ ಬೆದರಿಕೆ ಹಾಕಿರುವ ಶಂಕೆ ವ್ಯಕ್ತವಾಗಿದ್ದು, ತನಿಖೆ ಮುಂದುವರೆದಿದೆ.

# ಬಾಹ್ಯಾಕಾಶದಿಂದ ಭೂಮಿಗೆ ಸುರಕ್ಷಿತವಾಗಿ ಮರಳಿದ ಗಗನಯಾತ್ರಿ ಶುಭಾಂಶು ಶುಕ್ಲಾ

**ಕ್ಯಾಲಿಫೋರ್ನಿಯಾ,ಜು.15–**ಹದಿನೆಂಟು ದಿನಗಳ ಬಾಹ್ಯಾಕಾಶ ನಡಿಗೆ ನಂತರ ಭಾರತೀಯ ಗಗನಯಾತ್ರಿ ಶುಭಾಂಷು ಶುಕ್ಲಾ ಸೇರಿದಂತೆ ನಾಲ್ವರು ಭೂಮಿಗೆ ಸುರಕ್ಷಿತವಾಗಿ ಬಂದಿಳಿದಿದ್ದಾರೆ.ಶುಭಾಂಷು ಸುಮಾರು 433 ಗಂಟೆಗಳ ಕಾಲ ಬಾಹ್ಯಾಕಾಶದಲ್ಲಿದ್ದು ಹೊಸ ದಾಖಲೆ ನಿರ್ಮಿಸಿದ್ದಾರೆ.ನಾಲ್ವರು ಗಗನಯಾತ್ರಿಗಳನ್ನು ಹೊತ್ತ ಡ್ರಾಗನ್ ಕ್ಯಾಪ್ಸುಲ್ ಕ್ಯಾಲಿಫೋರ್ನಿಯಾದ ಫೆಸಿಫಿಕ್ ಸಾಗರದತ್ತ ಇಂದು ಬಂದಿಳಿದಿದೆ. ಅಂತಾರಿಕ್ಷಾದಲ್ಲಿ ಸುಮಾರು 17 ದಿನ ವಿವಿಧ ಪ್ರಯೋಗಗಳಲ್ಲಿ ಪಾಲ್ಗೊಂಡಿದ್ದ ಕಮಾಂಡರ್ ಶುಭಾಂಷು, ಅಮೆರಿಕದ ಪೆಗ್ಗಿ ವಿಟ್ಸನ್, ಹಂಗೇರಿಯ ಟಿಬೋರ್ ಕಾಪು, ಪೋಲೆಂಡ್‌ನ ಸ್ಲಾವೋಸ್ ಯುವಿನ್ನಿವ್‌ಕಿ ಸುರಕ್ಷಿತವಾಗಿ ಭೂಮಿಯನ್ನು ಸ್ಪರ್ಶಿಸಿದ್ದಾರೆ.

ಈ ಪ್ರಯೋಗ ಯಶಸ್ವಿಯಾಗಿದ್ದು, ಮಿಷನ್ ಪೈಲೆಟ್ ಶುಭಾಂಷು ಬಗ್ಗೆ ಇಡೀ ಭಾರತಾದ್ಯಂತ ಹೆಮ್ಮೆ ವ್ಯಕ್ತವಾಗಿದೆ. ಅವರ ಕುಟುಂಬ ಸದಸ್ಯರು ಗಗನಯಾತ್ರೆಯನ್ನು ಯಶ್ವಸಿಗೊಳಿಸಿ ಸುರಕ್ಷಿತವಾಗಿ ಮರಳಿದ್ದಕ್ಕೆ ಸಿಹಿ ಹಂಚಿ ಸಂಭ್ರಮಿಸಿದ್ದಾರೆ.ಪ್ರಸ್ತುತ ಅವರನ್ನು ಭೂಮಿಯ ವಾತಾವರಣಕ್ಕೆ ಒಗ್ಗಿಕೊಳ್ಳುವ ಸಲುವಾಗಿ ಅವರನ್ನು ಕ್ವಾರಂಟೈನ್‌ನಲ್ಲಿ ಇರಿಸಲಾಗಿದೆ.ಅಂತಾರಾಷ್ಟ್ರೀಯ ಬಾಹ್ಯಾಕಾಶ ಕೇಂದ್ರದಲ್ಲಿ ಆಕ್ಸಿಯಂ–4 ಮಿಷನ್‌ನಲ್ಲಿ ಪ್ರಯೋಗಗಳನ್ನು ನಡೆಸಿ ನಿನ್ನೆ ಈ ನಾಲ್ವರು ಗಗನಯಾತ್ರಿಗಳು ಭೂಮಿಯತ್ತ ಪ್ರಯಾಣ ಆರಂಭಿಸಿದ್ದರು.ಭೂಮಿಯ ಓಜನ್ ಪದರ ದಾಟುವವರೆಗೂ ವೇಗವಾಗಿ ಬಂದ ಡ್ರಾಗ್ಯನ್ ನಂತರ ವೇಗ ಕಡಿಮೆ ಮಾಡಿಕೊಂಡು ಸುರಕ್ಷಿತವಾಗಿ ಭೂಮಿಯ ವಾತಾವರಣಕ್ಕೆ ಬಂದಿದೆ.

## ರಾಷ್ಟ್ರೀಯ ಲೋಕ್ ಅದಾಲತ್‌ದಲ್ಲಿಒಟ್ಟು 1,76,324 ಪ್ರಕರಣಗಳು ಇತ್ಯರ್ಥ




**ಕಲಬುರಗಿ,ಜು.15–**ಗೌರವಾನ್ವಿತ ಉಚ್ಚ ನ್ಯಾಯಾಲಯ ಹಾಗೂ ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದ ಅಡಿಯಲ್ಲಿ (ದಿನಾಂಕ:12–07–2025ರಂದು) ಶನಿವಾರ ಕಲಬುರಗಿ ಜಿಲ್ಲೆಯ ಎಲ್ಲಾ ನ್ಯಾಯಾಲಯಗಳಲ್ಲಿ ಜರುಗಿದ ರಾಷ್ಟ್ರೀಯ ಲೋಕ್ ಅದಾಲತ್‌ನಲ್ಲಿ ಒಟ್ಟು 1,76,324 ಪ್ರಕರಣಗಳು ಇತ್ಯರ್ಥವಾಗಿದ್ದು, ಅವುಗಳಲ್ಲಿ 15,877 ಪೆಂಡಿಂಗ್ ಪ್ರಕರಣಗಳು ಹಾಗೂ 1,60,447 ವ್ಯಾಜ್ಯಪೂರ್ವ ಪ್ರಕರಣಗಳು ಇತ್ಯರ್ಥಗೊಂಡಿರುತ್ತವೆ ಎಂದು ಕಲಬುರಗಿ ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಶ್ರೀನಿವಾಸ್ ನವಲೆ ಅವರು ತಿಳಿಸಿದ್ದಾರೆ.

ಅದೇ ರೀತಿ ಜಿಲ್ಲೆಯಲ್ಲಿ 09 ಪ್ರಕರಣಗಳಲ್ಲಿ ಬೇರ್ಪಡೆಯಾಗಿದ್ದ ಪತಿ ಮತ್ತು ಪತ್ನಿಯರನ್ನು ಒಂದುಗೂಡಿಸಲಾಯಿತು. 10 ವರ್ಷಗಳಿಗಿಂತ ಹೆಚ್ಚಿನ ಅವಧಿಯ 01 ಪ್ರಕರಣ, 05 ವರ್ಷಗಳಿಗಿಂತ ಹೆಚ್ಚಿನ ಅವಧಿಯ 05 ಪ್ರಕರಣಗಳನ್ನು ರಾಜಿ ಮಾಡಿಸಿದ್ದು, ಈ ಮೂಲಕ ಕಲಬುರಗಿ ಜಿಲ್ಲೆಯಲ್ಲಿ ಮೆಗಾ ಲೋಕ್ ಅದಾಲತ್ ಅದ್ಭುತ ಯಶಸ್ಸನ್ನು ಕಂಡಿರುತ್ತದೆ.

ಕಲಬುರಗಿ ಪ್ರಧಾನ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರಾದ ಜಿ.ಎಲ್. ಲಕ್ಷ್ಮೀನಾರಾಯಣ ಸೇರಿದಂತೆ ಜಿಲ್ಲೆಯ ಎಲ್ಲಾ ನ್ಯಾಯಾಧೀಶರು, ನ್ಯಾಯವಾದಿಗಳು, ಸಾರ್ವಜನಿಕರು ಹಾಗೂ ಕಕ್ಷಿದಾರರ ಸಹಕಾರದಿಂದ ರಾಷ್ಟ್ರೀಯ ಲೋಕ್ ಅದಾಲತ್ ಮೂಲಕ ಸಿವಿಲ್ ದಾವೆಗಳು, ಮೋಟಾರು ವಾಹನ ಅಪಘಾತ ಪರಿಹಾರ ಪ್ರಕರಣಗಳು, ರಾಜಿಯಾಗಬಹುದಾದ ಕ್ರಿಮಿನಲ್ ಪ್ರಕರಣಗಳು, ಚೆಕ್ ಪ್ರಕರಣಗಳು, ಭೂಸ್ವಾಧೀನ ಪರಿಹಾರ ವಸೂಲಾತಿ ಪ್ರಕರಣಗಳು ಹಾಗೂ ಬ್ಯಾಂಕ್‌ಗಳಿಗೆ ಸಂಬಂಧಿಸಿದ ವ್ಯಾಜ್ಯಪೂರ್ವ ಪ್ರಕರಣಗಳನ್ನು ಇತ್ಯರ್ಥಗೊಳಿಸಲಾಗಿದೆ. ಶನಿವಾರ ರಾಜ್ಯದ ಎಲ್ಲಾ ನ್ಯಾಯಾಲಯಗಳಲ್ಲಿ ಈ ರಾಷ್ಟ್ರೀಯ ಲೋಕಅದಾಲತ್ ಹಮ್ಮಿಕೊಳ್ಳಲಾಗಿತ್ತು.

ಈ ಲೋಕ ಅದಾಲತ್‌ನಲ್ಲಿ ಕಕ್ಷಿದಾರರು, ನ್ಯಾಯಾಧೀಶರು, ಸಂಧಾನಕಾರರು ಹಾಗೂ ಸಂಬಂಧಪಟ್ಟ ನ್ಯಾಯವಾದಿಗಳು ರಾಜೀ ಸಂಧಾನ ಪ್ರಕ್ರಿಯೆಯಲ್ಲಿ ಪಾಲ್ಗೊಂಡಿದ್ದರು.

## ಜನಾರ್ಧನರೆಡ್ಡಿಗೆ ಹೈಕೋರ್ಟ್ ನೋಟೀಸ್



**ಬೆಂಗಳೂರು, ಜು.15 –** ಗಂಗಾವತಿ ಶಾಸಕ ಜನಾರ್ಧನರೆಡ್ಡಿ ಅವರಿಗೆ ಹೈಕೋರ್ಟ್ ನೋಟೀಸ್ ಜಾರಿ ಮಾಡಿ ವಿವರಣೆ ಕೇಳಿದೆ. ಕಳೆದ 2023 ರಲ್ಲಿ ನಡೆದ ಚುನಾವಣಾ ಸಂದರ್ಭದಲ್ಲಿ ಆಯೋಗಕ್ಕೆ ನೀಡಿದ ಅಫಿಡವಿಟ್ ನಲ್ಲಿ ಕೆಲ ಮಾಹಿತಿಗಳನ್ನು ನೀಡದೆ ವಂಚನೆ ಜನಾರ್ಧನರೆಡ್ಡಿ ವಂಚನೆ ಮಾಡಿದ್ದು ಅವರ ಮೇಲೆ ಕ್ರಮ ಆಗಬೇಕೆಂದು ಟಪಾಲ್ ಶ್ಯಾಮ್ ಪ್ರಸಾದ್ ನ್ಯಾಯಲಯದ ಮೊರೆ ಹೋಗಿದ್ದರು.

ಜನಾರ್ಧನರೆಡ್ಡಿ ಅವರು ನಡೆಸಿದ ಮೈನಿಂಗ್ ವ್ಯವಹಾರಕ್ಕೆ ಸಂಬಂಧಿಸಿ 2011 ರಲ್ಲಿ ಸುಮಾರು 80 ಕೋಟಿ ರೂ ಸಿಎಸ್ ಟಿ ಕಟ್ಟುವ ಬಗ್ಗೆ ನೋಟೀಸ್ ನೀಡಲಾಗಿತ್ತು. ಈ ಬಗ್ಗೆ ಅಫಿಡವಿಟ್ ನಲ್ಲಿ ಮಾಹಿತಿ ಒದಗಿಸಿಲ್ಲ. 2025 ರ ವರೆಗೂ ಇನ್ನು ಈ ತೆರಿಗೆ ಹಣ ಪಾವತಿಸಿಲ್ಲ. ಎಸ್ ಐಟಿ 2015 ರಲ್ಲಿ ದಾಖಲಿಸಿದ ಕೇಸ್ ನಂ 2728 ಬಗ್ಗೆಯೂ ಮಾಹಿತಿ ನೀಡಿಲ್ಲ ಎಂದು ನ್ಯಾಯಾಲಯದ ಮೊರೆ ಹೋಗಿತ್ತು. ಈ ಬಗ್ಗೆ ವಿವರಣೆ ನೀಡಲು ಜನಾರ್ಧನರೆಡ್ಡಿ ಅವರಿಗೆ ಕೋರ್ಟ್ ನೋಟೀಸ್ ಜಾರಿ ಮಾಡಿದೆ.

## ಬಳ್ಳಾರಿಯ ಹೊಸ ಡಿಐಜಿ ವರ್ತಿಕ ಕಟಿಯಾರ್



**ಬಳ್ಳಾರಿ, ಜು.15–** ಲೋಕೇಶ್ ಅವರ ನಿವೃತ್ತಿಯಿಂದ ತೆರವಾಗಿದ್ದ ಇಲ್ಲಿನ ಬಳ್ಳಾರಿ ವಲಯದ ಡಿಐಜಿ ಹುದ್ದೆಗೆ ವರ್ತಿಕ ಕಟಿಯಾರ್ ಅವರನ್ನು ವರ್ಗಾವಣೆ ಮಾಡಲಾಗಿದೆ.

ಇಲ್ಲಿಗೆ ವರ್ಗ ಮಾಡುವ ಮುನ್ನ ಕಟಿಯಾರ್ ಅವರು ಬೆಂಗಳೂರಿನಲ್ಲಿ ಹೋಮ್ ಗಾರ್ಡ್ ವಿಭಾಗದ ಡಿಐಜಿಯಾಗಿದ್ದರು. ಎಸ್ಪಿ ಮತ್ತು ಡಿಐಜಿ ಇಬ್ಬರು ಈ ಜಿಲ್ಲೆಗೆ ಮಹಿಳೆಯರಾಗಿದ್ದಾರೆ.

# ಅಪೌಷ್ಠಿಕ ಮಕ್ಕಳ ಆರೋಗ್ಯ ತಪಾಸಣೆ ಶಿಬಿರ



**ಯುವ ಮಾರ್ಗ ಸುದ್ದಿ**

**ಲಿಂಗಸುಗೂರು,ಜು.15–** ರಕ್ತ ಹೀನತೆ ಇರುವ ಅಪೌಷ್ಠಿಕ ಮಕ್ಕಳ ಆರೋಗ್ಯ ತಪಾಸಣಾ ಶಿಬಿರವನ್ನು ಸ್ಥಳೀಯ ಸರಕಾರಿ ಆಸ್ಪತ್ರೆಯಲ್ಲಿ ಮಂಗಳವಾರ ಹಮ್ಮಿಕೊಳ್ಳಲಾಗಿತ್ತು.

ಅನಿಮಿಯ ಮುಕ್ತ ಪೌಷ್ಠಿಕ ಕರ್ನಾಟಕ ಅಭಿಯಾನದಲ್ಲಿ ತಾಲೂಕಿನಲ್ಲಿರುವ ಅಪೌಷ್ಠಿಕ ಮಕ್ಕಳ ಹೊಮೋಗ್ಲೋಬಿನ್ ಪರೀಕ್ಷಿಸುವ ಕಾರ್ಯ ಪ್ರಗತಿಯಲ್ಲಿದೆ. ತೀವ್ರ ರಕ್ತಹೀನತೆ ಇರುವ ಮಕ್ಕಳಿಗೆ ತಜ್ಞರಿಂದ ಅಗತ್ಯ ಚಿಕಿತ್ಸೆ ಕೊಡಿಸಲಾಗುತ್ತಿದೆ. ಸಕ್ಕರೆ ಕಾಯಿಲೆ, ರಕ್ತ ಹೀನತೆ ಪ್ರಮಾಣ ಹೆಚ್ಚಾಗಿದ್ದ ಮಕ್ಕಳನ್ನು ಹೆಚ್ಚಿನ ಚಿಕಿತ್ಸೆಗಾಗಿ ರಾಯಚೂರು ರಿಮ್ಸ್ ಆಸ್ಪತ್ರೆಗೆ ಶಿಫಾರಸ್ಸು ಮಾಡಲಾಗುತ್ತಿದೆ. ರಕ್ತ ಹೀನತೆ ಇರುವ ಮಕ್ಕಳಿಗೆ ರಕ್ತ ವರ್ಗಾವಣೆ ಮಾಡಲಾಗುತ್ತದೆ ಎಂದು ಸರಕಾರಿ ಆಸ್ಪತ್ರೆ ಮುಖ್ಯ ವೈದ್ಯಾಧಿಕಾರಿ ಡಾ.ರುದ್ರಗೌಡ ಪೋಲಿಸ್‌ಪಾಟೀಲ್ ತಿಳಿಸಿದರು.

ಈ ಸಂದರ್ಭದಲ್ಲಿ ಮಕ್ಕಳ ತಜ್ಞ ಡಾ. ಸಂಜೀವರೆಡ್ಡಿ ಅಪೌಷ್ಠಕ ಮಕ್ಕಳ ಆರೋಗ್ಯ ತಪಾಸಣೆ ಮಾಡಿ ಅಗತ್ಯ ಔಷದೋಪಚಾರ ನೀಡಿದರು. ಶಿಬಿರದಲ್ಲಿ ಡಾ.ಸೂಗುರೇಶ, ಡಾ.ಶಂಕರಾಚಾರ್ಯ, ಆರೋಗ್ಯ ಶಿಕ್ಷಣಾಧಿಕಾರಿ ಪ್ರಾಣೇಶ್ ಜೋಶಿ, ಆಪ್ತ ಸಮಾಲೋಚಕರಾದ ಹುಚ್ಚಪ್ಪ, ಗೌರಮ್ಮ, ಶುಶ್ರೂಕಿಯರಾದ ರೇಷ್ಮಾ, ಫಿಲೊಮಿನಾ ಸೇರಿ ಇತರರಿದ್ದರು.

# ಶಾಸಕರ ಸಮಸ್ಯೆಗೆ ಸ್ಪಂದಿಸಿ



**ಬೆಂಗಳೂರು,ಜು.15–**ನಿನ್ನೆಯಿಂದ ರಾಜ್ಯಸರ್ಕಾರದ ಸಚಿವರ ಕಾರ್ಯವೈಖರಿಯ ಮೌಲ್ಯಮಾಪನ ನಡೆಸಿರುವ ರಾಜ್ಯ ಕಾಂಗ್ರೆಸ್ ಉಸ್ತುವಾರಿ ಹಾಗೂ ಎಐಸಿಸಿ ಪ್ರಧಾನ ಕಾರ್ಯದರ್ಶಿ ರಣದೀಪ್‌ಸಿಂಗ್ ಸುರ್ಜೇವಾಲಾ ಅವರು 2ನೇ ದಿನವಾದ ಇಂದೂ ಸಹ ಸಚಿವರುಗಳ ಜತೆ ಪ್ರತ್ಯೇಕ ಸಭೆ ನಡೆಸಿ ಶಾಸಕರ ದೂರು ದುಮ್ಮಾನಗಳಿಗೆ ಸ್ಪಂದಿಸುವಂತೆ ಕಿವಿಮಾತು ಹೇಳಿದರು.

ಕಳೆದ 2 ವಾರಗಳಿಂದ ಪ್ರತಿ ವಾರವೂ ಮೂರು ದಿನ ರಾಜ್ಯದಲ್ಲಿದ್ದು, ಶಾಸಕರ ಅಹವಾಲು ಆಲಿಸಿದ್ದ ಸುರ್ಜೇವಾಲಾ ಅವರು ನಿನ್ನೆಯಿಂದ ಸಚಿವರುಗಳಿಗೆ ಕಿವಿಮಾತು ಹೇಳುವ ಜತೆಗೆ ಅವರ ಇಲಾಖೆಗಳ ಸಾಧನೆಗಳ ಪರಾಮರ್ಶೆಯೂ ನಡೆಸಿದ್ದು, ಇಂದು ಮಧ್ಯಾಹ್ನದ ಹೊತ್ತಿಗೆ ಸಚಿವರಾದ ಸತೀಶ್ ಜಾರಕಿಹೊಳಿ, ಎಸ್.ಎಸ್ ಮಲ್ಲಿಕಾರ್ಜುನ್, ಬೋಸರಾಜು, ಮಧುಬಂಗಾರಪ್ಪ, ಪರಿಸರ ಮಾಲಿನ್ಯ ನಿಯಂತ್ರಣ ಮಂಡಳಿ ಅಧ್ಯಕ್ಷ ನರೇಂದ್ರಸ್ವಾಮಿ ಇವರುಗಳು ಭೇಟಿಯಾಗಿದ್ದು, ಮಧ್ಯಾಹ್ನದ ನಂತರ ಸಚಿವರಾದ ಲಕ್ಷ್ಮಿಹೆಬ್ಬಾಳ್ಕರ್, ಡಾ. ಹೆಚ್.ಸಿ ಮಹದೇವಪ್ಪ, ಆರ್.ಬಿ ತಿಮ್ಮಾಪುರ ಸೇರಿದಂತೆ ಹಲವು ಸಚಿವರು ಭೇಟಿಯಾಗಲಿದ್ದಾರೆ. ಈ ಎಲ್ಲ ಸಚಿವರುಗಳ ಜತೆ ಒನ್ ಟು ಒನ್ ಸಭೆ ನಡೆಸಿ ಶಾಸಕರ ಕೆಲಸ ಮಾಡಿಕೊಡುವಂತೆ ತಾಕೀತು ಮಾಡಿದರು. ಶಾಸಕರ ಕೆಲಸ ಕಾರ್ಯಗಳು ಆಗಬೇಕು. ಶಾಸಕರುಗಳು ಸಚಿವರುಗಳು ಸ್ಪಂದಿಸುತ್ತಿಲ್ಲ ಎಂಬ ದೂರು ನೀಡಿದ್ದಾರೆ. ಈ ರೀತಿಯ ದೂರುಗಳು ಬರದಂತೆ ಕೆಲಸ ಮಾಡಿ ಶಾಸ ಕರು ಕಾರ್ಯಕರ್ತರ ಅಹವಾಲಿಗೆ ಸ್ಪಂದಿಸಿ ಎಂದು ಸಚಿವರುಗಳಿಗೆ ನಿರ್ದೇಶನ ನೀಢಿದರು. ನಿನ್ನೆ ಬೆಂಗಳೂರಿಗೆ ಆಗಮಿಸಿರುವ ಸುರ್ಜೇವಾಲಾ ಅವರು ಸಚಿವರಾದ ಜಮೀರ್ ಅಹ್ಮದ್ ಖಾನ್, ಭೈರತಿ ಸುರೇಶ್, ರಹೀಂ ಖಾನ್ ಇವರುಗಳ ಜತೆ ಪ್ರತ್ಯೇಕ ಸಭೆ ನಡೆಸಿದರು. ಇಂದು ಕೆಲ ಸಚಿವರುಗಳ ಜತೆ ಸಭೆ ನಡೆಸಿ ರುವ ಸುರ್ಜೇವಾಲಾ ಅವರು ನಾಳೆಯೂ ಸಹ ಸಚಿವರುಗಳ ಜತೆ ಸಮಾಲೋಚನೆಗಳನ್ನು ಮುಂದುವರೆಸುವರು. ನಾಳೆ ಸಚಿವರುಗಳ ಜತೆ ಸಭೆ ನಡೆಸಿದ ಬಳಿಕ ಸುರ್ಜೇವಾಲಾ ಅವರು ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪಮುಖ್ಯಮಂತ್ರಿ ಡಿ.ಕೆ ಶಿವಕುಮಾ ಜತೆಯೂ ಸಭೆ ನಡೆಸಿ ಶಾಸಕರುಗಳ ಹಾಗೂ ಸಚಿವರ ಜತೆಗಿನ ಸಭೆಯ ವಿವರಗಳನ್ನು ಗಮನಕ್ಕೆ ತರುವರು ಎಂದು ಹೇಳಲಾಗಿದೆ. ಶಾಸಕರ ಅಸಮಾಧಾನ ಅತೃಪ್ತಿಯನ್ನು ಶಮನ ಗೊಳಿಸುವ ನಿಟ್ಟಿನಲ್ಲಿ ಈ ಸರಣಿ ಸಭೆಗಳನ್ನು ನಡೆಸಿರುವ ಸುರ್ಜೇವಾಲಾ ಅವರು ಅಂತಿ ಮವಾಗಿ ಹೈಕಮಾಂಡ್‌ಗೂ ವರದಿ ನೀಡುವರು.

# ಕೆ.ಕೆ.ಆರ್.ಡಿ.ಬಿ. ರೂ. 50.00 ಲಕ್ಷ ಅನುದಾನ ದುರುಪಯೋಗ ಮನವಿ




**ಬೀದರ:ಜು.15–** ಜಿಲ್ಲೆಯ ಭಾಲ್ಕಿ ತಾಲೂಕಿನ ಜೋಳದಾಬಕಾ ಗ್ರಾಮದಲ್ಲಿ ಸರಕಾರಿ ಹಿರಿಯ ಪ್ರಾಥಮಿಕ ಶಾಲೆ ಕಟ್ಟಡ ಶಿಥಿಲಾವಸ್ಥೆಯಲ್ಲಿದ್ದ ಕಾರಣ ಸದರಿ ಶಾಲೆಯ ಕಟ್ಟಡವನ್ನು ನೆಲಸಮಗೊಳಿಸಿ, ಕೆ.ಕೆ.ಆರ್.ಡಿ.ಬಿ. ರೂ. 50.00 ಲಕ್ಷ ಅನುದಾನದಡಿಯಲ್ಲಿ ಸದರಿ ಶಾಲೆಯ ಹೊಸ ಕಟ್ಟಡವನ್ನು ನಿರ್ಮಾಣ ಮಾಡಲಾಗುತಿದೆ. ಆದರೆ ಸದರಿ ಶಾಲಾ ಕಟ್ಟಡದ ನೆಲಸಮಗೊಳಿಸಿದ ಕಲ್ಲುಗಳನ್ನೇ ಈಗ ನಿರ್ಮಿಸುತ್ತಿರುವ ಶಾಲಾ ಕಟ್ಟಡದಲ್ಲಿ ಬಳಸಲಾಗುತ್ತಿದೆ. ಹಳೆ ಶಾಲಾ ಕಟ್ಟಡ ನೆಲಸಮಗೊಳಿಸಿ, ಅದರಲ್ಲಿದ್ದ ಹಳೆಯ ಕಬ್ಬಿಣದ ರಾಡುಗಳನ್ನು ಜೆ.ಇ. ಮತ್ತು ಗುತ್ತಿಗೆದಾರರು ಸೇರಿಕೊಂಡು, ಹಳೆಯ ರಾಡುಗಳನ್ನು ಮಾರಿಕೊಂಡು, ಸರ್ಕಾರದ ಬೊಕ್ಕಸಕ್ಕೆ ನಷ್ಟವನ್ನುಂಟು ಮಾಡಿದ್ದಾರೆ. ಜೆ.ಇ. ಮತ್ತು ಗುತ್ತಿಗೆದಾರರು ಸೇರಿಕೊಂಡು, ಅಂದಾಜು ಪಟ್ಟಿಯಂತೆ ಶಾಲಾ ಕಟ್ಟಡ ನಿರ್ಮಾಣ ಮಾಡದೇ, ಕಳಪೆ ಸಾಮಗ್ರಿಗಳನ್ನು ಬಳಸಿ, ಸದರಿ ಶಾಲಾ ಕಟ್ಟಡ ನಿರ್ಮಾಣ ಮಾಡಲಾಗುತ್ತಿದೆ.

ಆದ್ದರಿಂದ ಇದರ ಬಗ್ಗೆ ಗಂಭೀರವಾಗಿ ಪರಿಗಣಿಸಿ, ಸದರಿ ಶಾಲಾ ಕಟ್ಟಡ ಕಾಮಗಾರಿಯನ್ನು ಖುದ್ದಾಗಿ ಪರಿಶೀಲಿಸಿ, ಒಂದು ವೇಳೆ ಸದರಿ ಕಾಮಗಾರಿ ಕಳಪೆ ಮಟ್ಟದಿಂದ ಕೂಡಿರುವ ಬಗ್ಗೆ ಕಂಡು ಬಂದಲ್ಲಿ, ಸದರಿ ಜೆ.ಇ. ಮತ್ತು ಗುತ್ತಿಗೆದಾರರ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳಬೇಕು ಒಂದು ವೇಳೆ ತಾವು ಕ್ರಮ ಕೈಗೊಳ್ಳದಿದ್ದ ಪಕ್ಷದಲ್ಲಿ ಸಂಘಟನೆ ಮತ್ತು ಗ್ರಾಮಸ್ಥರು ಸೇರಿಕೊಂಡು ಕಚೇರಿಯ ಮುಂದೆ ಒಂದು ದಿನದ ಸಾಂಕೇತಿಕ ಧರಣಿಯನ್ನು ಹಮ್ಮಿಕೊಳ್ಳಲಾಗುವುದೆಂದು ಇಂದು ಭಾರತೀಯ ರಾಷ್ಟ್ರೀಯ ಭೀಮ ಆರ್ಮಿ ಸಮಿತಿ, ತಾಲುಕಾ ಘಟಕ ಭಾಲ್ಕಿ ವತಿಯಿಂದ ಭಾಲ್ಕಿ ಲೋಕೋಪಯೋಗಿ ಉಪ ವಿಭಾಗದ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರಿಗೆ ಮನವಿ ಸಲ್ಲಿಸಿದ್ದಾರೆ.

ಈ ಸಂದರ್ಭದಲ್ಲಿ ಭಾರತೀಯ ರಾಷ್ಟ್ರೀಯ ಭೀಮ ಆರ್ಮಿ ಸಮಿತಿಯ ಸಂಸ್ಥಾಪಕ ರಾಜ್ಯಾಧ್ಯಕ್ಷರಾದ ದೀಲಿಪ ಕುಮಾರ ವರ್ಮಾ, ತಾಲೂಕಾಧ್ಯಕ್ಷರಾದ ಗೌತನ ಕೌಡೆ, ದಲಿತ ಮುಖಂಡರಾದ ಉತ್ತಮ ಕುಮಾರ್ ಕುಂದೆ, ಮಿಲಿಂದ್ ಲಾಂಬ್ಲೆ, ಸಿದ್ದು ಜಮಾದಾರ್, ಅಮರ್ ಕುಮಾರ್ ಕಟ್ಟಿಮನಿ, ಅಂಬಾದಾಸ್ ಕುಂದೆ, ದರ್ಶನ್ ಕುಂಟೆ ಸೇರಿದಂತೆ ಇತರರು ಉಪಸ್ಥಿತರಿದ್ದರು.

## ಎಪಿಎಂಸಿ ಹೋರಾಟ ಬೆಂಬಲಿಸಿ ಕೊಪ್ಪಳದಲ್ಲಿ ಪ್ರತಿಭಟನೆ



**ಕಲಬುರಗಿ,ಜು.15–** ಕಲಬುರಗಿ ಉಸ್ತುವಾರಿ ಸಚಿವರನ್ನು ಬದಲಿಸಬೇಕು. ಕೃಷಿ ಮಾರುಕಟ್ಟೆ ಸಚಿವರ ರಾಜಿನಾಮೆ ಪಡೆಯಬೇಕು ಎಪಿಎಂಸಿ ನಿರ್ದೇಶಕರನ್ನು ಕಲಬುರಗಿ ಜಿಲ್ಲಾಧಿಕಾರಿಗಳನ್ನು ಅಮಾನತು ಮಾಡಬೇಕು ಎಪಿಎಂಸಿಯಲ್ಲಿರುವ ಅನಧಿಕೃತ ಅಂಗಡಿಗಳನ್ನು ತಕ್ಷಣದಿಂದಲೆ ತೆರವುಗೊಳಿಸಬೇಕು.ಎಪಿಎಂಸಿ ಅಧಿಕಾರಿಗಳ ಸಾಮೂಹಿಕ ವರ್ಗಾವಣೆ ಮಾಡಬೇಕು. ಕೃಷಿಗೂ ಹೆಸರಿಗೂ ಸಂಬಂಧವಿರದ ನೆಹರು ಗಂಜ್ ಹೆಸರು ಬದಲಿಸಿ ಶ್ರೀಶರಣಬಸವೇಶ್ವರ ಗಂಜ್ ಎಂದು ಹೆಸರಿಟ್ಟು ಸದ್ಯಕ್ಕೆ ಇರುವ ಎಪಿಎಂಸಿ ಅಲ್ಲೆ ಮುಂದುವರೆಸಬೇಕು ಬೇರೆ ಕಡೆಗೆ ಸ್ಥಳಾಂತರಿ ಸಬಾರದು ಎಂದು ಆಗ್ರಹಿಸಿ,ಎಂ.ಎಸ್ ಪಾಟೀಲ ನರಿಬೋಳ ಹೋರಾಟ ಬೆಂಬಲಿಸಿ, ಕಾಂಗ್ರೆಸ್ ಸರ್ಕಾರದ ನಡೆ ಖಂಡಿಸಿ ಕೊಪ್ಪಳದ ಹೈದ್ರಾಬಾದ ಕರ್ನಾಟಕ ಯುವಶಕ್ತಿ ಸಂಘಟನೆಯಿಂದ ಜಿಲ್ಲಾಧಿಕಾರಿಗಳ ಕಚೇರಿ ಎದುರು ಪ್ರತಿಭಟನೆ ಮಾಡಿ ಮನವಿ ಸಲ್ಲಿಸಲಾಯಿತು. ಮುಂದೆ ಯು ನಿರ್ಲಕ್ಷಿಸಿದರೆ ಕೊಪ್ಪಳದಿಂದ ಕಲಬುರಗಿ ಎಪಿಎಂಸಿ ಕಚೇರಿವರೆಗೆ ಪಾದಯಾತ್ರೆ ಮಾಡಿ ಮುತ್ತಿಗೆ ಹಾಕುತ್ತೇವೆ ಎಂದು ಅದ್ಯಕ್ಷ ಬಸವರಾಜ ಗಾಣಿಗೇರ ಎಚ್ಚರಿಕೆ ನೀಡಿದ್ದಾರೆ. ಶ್ರೀನಿವಾಸ ದೇವಿಕೇರಿ ಇತರರಿದ್ದರು

## ಹುಬ್ಬಳ್ಳಿ–ರಾಮೇಶ್ವರಂ ವಿಶೇಷ ರೈಲು ರಾಮನಾಥಪುರಂವರೆಗೆ ಸಂಚಾರ

**ರಾಯಚೂರು,ಜು.15–**ದಕ್ಷಿಣ ರೈಲ್ವೆಯಲ್ಲಿನ ಕಾರ್ಯಾಚರಣೆಯ ನಿರ್ಬಂಧಗಳನ್ನು ಗಮನದಲ್ಲಿಟ್ಟುಕೊಂಡು 07355/07356 ಸಂಖ್ಯೆಯ ಎಸ್‌ಎಸ್‌ಎಸ್ ಹುಬ್ಬಳ್ಳಿ–ರಾಮೇಶ್ವರಂ–ಎಸ್‌ಎಸ್‌ಎಸ್ ಹುಬ್ಬಳ್ಳಿ ಸಾಪ್ತಾಹಿಕ ವಿಶೇಷ ಎಕ್ಸಪ್ರೆಸ್ ರೈಲಿನ ಸಂಚಾರದ ಅವಧಿಯನ್ನು ವಿಸ್ತರಿಸಲು ನಿರ್ಧರಿಸಲಾಗಿದೆ.

ಈ ವಿಶೇಷ ರೈಲು ತನ್ನ ಹಿಂದಿನ ನಿಗದಿತ ನಿಲ್ದಾಣವಾದ ರಾಮೇಶ್ವರಂ ಬದಲಿಗೆ ರಾಮನಾಥಪುರಂನಲ್ಲಿ ತನ್ನ ಪ್ರಯಾಣವನ್ನು ಕೊನೆಗೊಳಿಸಲಿದೆ ಮತ್ತು ಅಲ್ಲಿಂದಲೇ ತನ್ನ ಹಿಮ್ಮುಖ ಪ್ರಯಾಣವನ್ನು ಪ್ರಾರಂಭಿಸಲಿದೆ. ಆದಾಗ್ಯೂ, ಈ ರೈಲುಗಳು ಪ್ರಸ್ತುತ ಇರುವ ಸಂಯೋಜನೆ, ಸಮಯ ಮತ್ತು ನಿಲುಗಡೆಗಳೊಂದಿಗೆ ತಮ್ಮ ಸಂಚಾರವನ್ನು ಮುಂದುವರಿಸಲಿವೆ. ಇದರನ್ವಯ, ಈ ಹಿಂದೆ ಜುಲೈ 26ರವರೆಗೆ ಸಂಚರಿಸಬೇಕಿದ್ದ 07355 ಸಂಖ್ಯೆಯ ಎಸ್‌ಎಸ್‌ಎಸ್ ಹುಬ್ಬಳ್ಳಿ–ರಾಮೇಶ್ವರಂ ಸಾಪ್ತಾಹಿಕ ವಿಶೇಷ ಎಕ್ಸಪ್ರೆಸ್ ರೈಲು ಈಗ ಆಗಸ್ಟ್ 9 ರಿಂದ 30 ರವರೆಗೆ ನಾಲ್ಕು ಹೆಚ್ಚುವರಿ ಟ್ರಿಪ್‌ಗಳಿಗೆ ವಿಸ್ತರಿಸಲಾಗಿದೆ. ಈ ರೈಲು ಈಗ ರಾಮೇಶ್ವರಂ ಬದಲು ರಾಮನಾಥಪುರಂನಲ್ಲಿ ತನ್ನ ಸಂಚಾರವನ್ನು ಮೊಟಕುಗೊಳಿಸಲಿದೆ. ಅದೇ ರೀತಿ, ಈ ಹಿಂದೆ ಜುಲೈ 27ರವರೆಗೆ ಸಂಚರಿಸಬೇಕಿದ್ದ 07356 ಸಂಖ್ಯೆಯ ರಾಮೇಶ್ವರಂ ಎಸ್‌ಎಸ್‌ಎಸ್ ಹುಬ್ಬಳ್ಳಿ ಸಾಪ್ತಾಹಿಕ ವಿಶೇಷ ಎಕ್ಸಪ್ರೆಸ್ ರೈಲು ಈಗ ಆಗಸ್ಟ್ 10 ರಿಂದ 31ರವರೆಗೆ ನಾಲ್ಕು ಹೆಚ್ಚುವರಿ ಟ್ರಿಪ್‌ಗಳಿಗೆ ವಿಸ್ತರಿಸಲಾಗಿದೆ. ಈ ರೈಲು ಈಗ ರಾಮೇಶ್ವರಂ ಬದಲು ರಾಮನಾಥಪುರಂನಿಂದ ತನ್ನ ಸಂಚಾರವನ್ನು ಪ್ರಾರಂಭಿಸಲಿದೆ ಎಂದು ನೈರುತ್ಯ ರೈಲ್ವೆ ವಲಯದ ಅಧಿಕಾರಿಗಳು ತಿಳಿಸಿದ್ದಾರೆ.

## ಸಮಾನತೆ ಮತ್ತು ಭಾವೈಕತೆಯ ಸಂಕೇತವೇ ಸಮವಸ್ತ್ರ: ಬಾಪುರಾಯ ಬಿರಾದಾರ




**ಬೀದರ,ಜು.15–**ಸಮವಸ್ತ್ರವು ಬಡವ ಶ್ರೀಮಂತ ಎಂಬ ಭೇದಭಾವವನ್ನು ತೊಲಗಿಸಿ ಮಕ್ಕಳಲ್ಲಿ ಏಕತೆ ಭಾವವನ್ನು ಮೂಡಿಸುವುದರ ಜೊತೆಗೆ ಶಿಸ್ತು ಅನುಶಾಸನ ತರುವುದಕ್ಕೆ ಸಹಾಯಕವಾಗಿದೆ ಎಂದು ದಿ: 14–07–2025ರಂದು ಆಯೋಜಿಸಿದ ಶ್ರೀ ಮಡಿವಾಳೇಶ್ವರ ಶಾಲೆಯ ಸಮವಸ್ತ್ರ ದಿನಾಚರಣೆ ಕಾರ್ಯಕ್ರಮದ ಮುಖ್ಯ ಅತಿಥಿಗಳಾಗಿ ಆಗಮಿಸಿದ ಶ್ರೀ ಬಾಪುರಾಯ ಬಿರಾದಾರ ಎ.ಎಸ್.ಐ ಮಾರ್ಕೆಟ್ ಠಾಣೆ, ಬೀದರ. ಇವರು ತಮ್ಮ ಅತಿಥಿಗಳ ನುಡಿಗಳಲ್ಲಿ ಸಮವಸ್ತ್ರದ ಬಗ್ಗೆ ಮಕ್ಕಳು ವಿಶೇಷ ಗೌರವ ಶ್ರದ್ಧೆ ಭಾವನೆ ಮೈಗೂಡಿಸಿಕೊಳ್ಳಬೇಕು. ಯಾವುದೇ ವ್ಯಕ್ತಿ ಉನ್ನತ ಮಟ್ಟದ ಸಾಧನೆ ಮಾಡಬೇಕಾದರೆ ಜೀವನದಲ್ಲಿ ಶಿಸ್ತು, ಅನುಶಾಸನ ಮತ್ತು ಸಂಸ್ಕಾರ ಬಹಳ ಮುಖ್ಯವಾಗಿರುತ್ತದೆ. ಶ್ರೀ ಮಡಿವಾಳೇಶ್ವರ ಶಾಲೆಯಲ್ಲಿ ಈ ವಿಷಯಗಳಿಗೆ ಮಹತ್ವ ಕೊಡುತ್ತಿರುವುದು ತುಂಬಾ ಶ್ಲಾಘನೀಯವಾಗಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಸಮವಸ್ತ್ರ ನಮ್ಮ ದಿನನಿತ್ಯದ ದಿನಚರಿಯಾಗಬೇಕು. ವಿದ್ಯಾರ್ಥಿಗಳು ಶಿಸ್ತು, ಸಂಯಮ ಮತ್ತು ಉತ್ತಮ ಹವ್ಯಾಸಗಳನ್ನು ಅಳವಡಿಸಿಕೊಂಡು ಉತ್ತಮ ಪ್ರಜೆಗಳಾಗಬೇಕೆಂದು ಸಂಸ್ಥೆಯ ಅಧ್ಯಕ್ಷರಾದ ಪ್ರೊ.ಎಸ್.ಬಿ. ಸಜ್ಜನಶೆಟ್ಟಿಯವರು ತಮ್ಮ ಅಧ್ಯಕ್ಷೀಯ ನುಡಿಯಲ್ಲಿ ಮಕ್ಕಳಿಗೆ ಪ್ರೇರಣದಾಯಕ ನುಡಿಗಳನ್ನು ತಿಳಿಸಿದರು.

ಅತಿಥಿಗಳು ಮತ್ತು ಅಧ್ಯಕ್ಷರು ಮಕ್ಕಳ ಸಮವಸ್ತ್ರವನ್ನು ವೀಕ್ಷಿಸಿ ಅತ್ಯುತ್ತಮ ಸಮವಸ್ತ್ರ ಧರಿಸಿದ ಮಕ್ಕಳಿಗೆ ಬಹುಮಾನ ಕೊಡುವುದರ ಮೂಲಕ ಅಭಿನಂದಿಸಿದರು.

ಈ ಕಾರ್ಯಕ್ರಮದ ವೇದಿಕೆ ಮೇಲೆ ಸಂಸ್ಥೆಯ ಕಾರ್ಯದರ್ಶಿಗಳು ಶ್ರೀ ಹನುಮಂತರಾವ ಪಾಟೀಲ, ಶ್ರೀ ಮಡಿವಾಳೇಶ್ವರ ಪ್ರೌಢ ಶಾಲೆಯ ಮುಖ್ಯಗುರುಗಳಾದ ಶ್ರೀ ಶರಣು ಪಾಟೀಲ ಹಾಗೂ ಪ್ರಾಥಮಿಕ ಶಾಲೆಯ ಮುಖ್ಯಗುರುಗಳು ಶ್ರೀಮತಿ ಅರ್ಚನಾ ಶಿರಗೆರೆ ಮತ್ತು ಎಲ್ಲಾ ಶಿಕ್ಷಕ ವೃಂದದವರು ಉಪಸ್ಥಿತರಿದ್ದರು.

10ನೇ ತರಗತಿಯ ವಿದ್ಯಾರ್ಥಿಗಳಾದ ತ್ರೀಶಾ ಸಿದ್ದೇಶ್ವರ ಸ್ವಾಗತಿಸಿದಳು, ಭವಾನಿ ನಾಗೇಂದ್ರ ವಂದಿಸಿದಳು, ವೈಷ್ಣವಿ ರಾಜೇಂದ್ರ ಪ್ರಸಾದ ನಿರೂಪಿಸಿದಳು, ಶ್ರೇಯಾ ಕೈಲಾಸ ವೈಯಕ್ತಿಕ ಗೀತೆ ಹಾಡಿದಳು ಕೊನೆಗೆ ರಾಷ್ಟ್ರಗೀತೆಯೊಂದಿಗೆ ಕಾರ್ಯಕ್ರಮ ಮುಕ್ತಾಯವಾಯಿತು.

ಸುದ್ದಿ ಮತ್ತು ಜಾಹೀರಾತಿಗಾಗಿ ಸಂಪರ್ಕಿಸಿ
9743497111
9743496111

Owned, Printed and published by ANILKUMAR H from Plot No. # 3-5-415/-A MANVI Pooja Rice Mill, Near Kataraki Road, Manvi Tq. Manvi, Dist, Raichur-584123, Printed at MAA FRIENDS PRINTING PRESS, Plot No. # 3-5-415/-A Pooja Rice Mill Near Kataraki Road, Manvi Tq. Manvi, Dist: Raichur-584123, State: Karnataka Editor: ANILKUMAR H